ಸಂಪುಟ : 11 ಸಂಚಿಕೆ: 27 ಪುಟ : 4+2 ಬೆಲೆ: 3.00 ಬುಧವಾರ ಫೆಬ್ರವರಿ 25 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ

Volume : 11 Issue : 27 Pages : 4+2 Price : 3.00 Wednesday February 25 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




ಜಿಲ್ಲಾಮಟ್ಟದ 12ನೇ ಜನತಾ ದರ್ಶನ | ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಿದ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್

# 'ನಡಿತೈತಿ ಬಿಡು' ಎನ್ನುವ ಅಧಿಕಾರಿಗಳು ಮನೆಗೆ ಹೋಗಿ!



### 87 ಅಹವಾಲು ಸ್ವೀಕಾರ

ಧಾರವಾಡ ಜಿಲ್ಲಾಡಳಿತದಿಂದ ಮಂಗಳವಾರ ಆಯೋಜಿಸಿದ್ದ ಜಿಲ್ಲಾ ಮಟ್ಟದ ಜನತಾ ದರ್ಶನದಲ್ಲಿ ಕಂದಾಯ ಇಲಾಖೆಯ 21, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ 20, ನಗರಾಭಿವೃದ್ಧಿ ಇಲಾಖೆ 19, ವಸತಿ ಇಲಾಖೆ 7, ಸಾರಿಗೆ ಇಲಾಖೆ 4, ಗೃಹ ಇಲಾಖೆ ಮತ್ತು ಇಂದನ ಇಲಾಖೆ 3 ಹಾಗೂ ಕೃಷಿ, ಶಾಲಾ ಶಿಕ್ಷಣ ಇಲಾಖೆ, ಆಹಾರ ಇಲಾಖೆಯ 2, ಹಿಂದುಳಿದ ವರ್ಗಗಳ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಆರೋಗ್ಯ ಇಲಾಖೆ, ಕಾರ್ಮಿಕ ಇಲಾಖೆಗಳ ತಲಾ ಒಂದು ಅಹವಾಲುಗಳು ಸೇರಿದಂತೆ ಒಟ್ಟು 87 ಅರ್ಜಿಗಳ ಸ್ವೀಕರಿಸಲಾಯಿತು. ಸ್ವೀಕರಿಸಿದ ಅರ್ಜಿಗಳನ್ನು ಕಾಲಮಿತಿಯಲ್ಲಿ ವಿಲೇವಾರಿ ಮಾಡಲು ಸಚಿವರು ಅಧಿಕಾರಿಗಳಿಗೆ ಸೂಚಿಸಿದರು.

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ನಮಗೆ, ನಮಗೆಲ್ಲರಿಗೂ ಇರುವ ಸಂಬಳ, ಸವಲತ್ತು ಸಾರ್ವಜನಿಕರಿಂದ ಬಂದಿದ್ದು, ನಮ್ಮ ನಮ್ಮ ಕೆಲಸ, ಕರ್ತವ್ಯಗಳನ್ನು ಮಾನವೀಯತೆ, ಆತ್ಮಸಾಕ್ಷಿಯಿಂದ ಮಾಡಬೇಕು. ವಿನಾಕಾರಣ ವಿಳಂಬ, ಉದ್ಯೋಗದಲ್ಲಿ ಆಲಸ್ಯ ತೋರಿಸುವ ಮತ್ತು 'ನಡಿತೈತಿ ಬಿಡು' ಎನ್ನುವ ಮನೋಭಾವನೆಯ ಅಧಿಕಾರಿ, ಸಿಬ್ಬಂದಿಗಳು ಮನೆಗೆ ಹೋಗಬಹುದು ಎಂದು ಕಾರ್ಮಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಅವರು ಮಂಗಳವಾರ ಮಧ್ಯಾಹ್ನ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಧಾರವಾಡ ಜಿಲ್ಲಾಡಳಿತ ಆಯೋಜಿಸಿದ್ದ ಜಿಲ್ಲಾ ಮಟ್ಟದ 12ನೇ ಜನತಾ ದರ್ಶನದಲ್ಲಿ ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸಿದ ನಂತರ ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ಉದ್ದೇಶಿಸಿ ಸಚಿವರು ಮಾತನಾಡಿದರು.

ಜನತಾ ದರ್ಶನದಲ್ಲಿ ಬರುವ ಅರ್ಜಿಗಳನ್ನು ಗಮನಿಸಿದಾಗ ಆಯಾ ಇಲಾಖೆ ಅಧಿಕಾರಿಗಳು ಸಾರ್ವಜನಿಕರ ದೂರುಗಳನ್ನು ಸರಿಯಾಗಿ ಪರಿಶೀಲಿಸದೆ ಕಾಟಾಚಾರಕ್ಕೆ ಉತ್ತರಿಸುತ್ತಿದ್ದಾರೆ ಎಂಬುದು ತಿಳಿಯುತ್ತದೆ. ಸಲ್ಲಿಕೆ ಆಗುವ ಸಮಸ್ಯೆಗಳನ್ನು ಸರಿಯಾಗಿ ಪರಿಶೀಲಿಸಿ, ಸೂಕ್ತ ಪರಿಹಾರ ನೀಡಬೇಕು. ಬೇರೆ ಹಂತಕ್ಕೆ ಅರ್ಜಿ ರವಾನಿಸಬೇಕಾದಲ್ಲಿ ಅರ್ಜಿದಾರನಿಗೆ ಸೂಕ್ತ ತಿಳುವಳಿಕೆ ನೀಡಬೇಕು.

ಆದರೆ ಸಂಬಂಧಿಸಿದ ಅಧಿಕಾರಿ, ಸಿಬ್ಬಂದಿಗಳು ಸಾರ್ವಜನಿಕ ಕಳಕಳಿ, ಮಾನವೀಯತೆ ನೋಡದೆ ಯಾಂತ್ರಿಕವಾಗಿ ವರ್ತಿಸುತ್ತಿದ್ದಾರೆ ಎಂಬುದು ಸಲ್ಲಿಕೆ ಆಗುತ್ತಿರುವ ಅರ್ಜಿಗಳಿಂದ ತಿಳಿದುಬರುತ್ತಿದೆ ಎಂದು ಸಚಿವರು ಅಸಮಾಧಾನ ವ್ಯಕ್ತಪಡಿಸಿದರು. ಜಿಲ್ಲೆಯ ಅಧಿಕಾರಿ, ನೌಕರರು ಕರ್ತವ್ಯದಲ್ಲಿ ಅಶಿಸ್ತು ತೋರಿದರೆ ಶಿಸ್ತು ಕ್ರಮ ಕೈಗೊಳ್ಳಲಾಗುತ್ತದೆ. ಸಾರ್ವಜನಿಕರು ಸಣ್ಣಪುಟ್ಟ ಸಮಸ್ಯೆಗಳಿಗಾಗಿ ಜಿಲ್ಲಾ ಹಂತದ ಕಚೇರಿಗಳಿಗೆ, ಜನತಾ ದರ್ಶನಕ್ಕೆ ಬರುವುದು ಉಚಿತವಲ್ಲ. ಎಲ್ಲ ಅಧಿಕಾರಿ ಸಿಬ್ಬಂದಿಗಳು ತಮ್ಮ ಹಂತದಲ್ಲಿಯೇ ಸಾರ್ವಜನಿಕ ಸಮಸ್ಯೆಗಳನ್ನು ಸಂಯಮದಿಂದ ಆಲಿಸಿ ಪರಿಹರಿಸಬೇಕು. ಅಗತ್ಯವಿದ್ದಲ್ಲಿ ಮಾತ್ರ ಮೇಲಾಧಿಕಾರಿಗಳಿಗೆ ಶಿಫಾರಸ್ಸು ಮಾಡಿ ಕಳುಹಿಸಬೇಕೆಂದು ಅವರು ಹೇಳಿದರು. ವಿವಿಧ ಗ್ರಾಮಗಳಿಂದ ಹಾಗೂ ನಗರ ಪ್ರದೇಶಗಳಿಂದ ಆಗಮಿಸಿದ್ದ ಸಾರ್ವಜನಿಕರು ತಮ್ಮ ವೈಯಕ್ತಿಕ ಸಮಸ್ಯೆಗಳನ್ನು ಹಾಗೂ ಮೂಲಭೂತ ಸೌಕರ್ಯಗಳ ಬಗ್ಗೆ ಅಹವಾಲುಗಳನ್ನು ಸಲ್ಲಿಸಿದರು.

ಮನವಿ ಸ್ವೀಕರಿಸಿದ ಜಿಲ್ಲಾ ಉಸ್ತುವಾರಿ ಸಚಿವರು, ಸಂಬಂಧಿಸಿದ ಅಧಿಕಾರಿಗಳನ್ನು ಕರೆದು, ಚರ್ಚಿಸಿ, ಇತ್ಯರ್ಥಕ್ಕೆ ನಿರ್ದೇಶಿಸಿದರು. ಇಂದಿನ ಜನತಾ ದರ್ಶನದಲ್ಲಿ ವಿವಿಧ ಇಲಾಖೆಗಳಿಗೆ ಸಂಭಂದಿಸಿದ 87ಕ್ಕೂ ಹೆಚ್ಚು ಅರ್ಜಿಗಳನ್ನು ಸ್ಥಳದಲ್ಲಿಯೇ ಪರಿಶೀಲಿಸಿ, ಪರಿಹಾರಕ್ಕೆ ಸೂಚಿಸಿದರು.



ಜಿಲ್ಲಾಧಿಕಾರಿ ಸ್ನೇಹಲ್ ಆರ್, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಐಎಎಸ್ ಪ್ರೊಬೇಷನರಿ ಅಧಿಕಾರಿ ರಿತಿಕಾ ವರ್ಮಾ, ಉಪವಿಭಾಗಾಧಿಕಾರಿ ಶಾಲಂ ಹಿಸೇನ್ ವೇದಿಕೆಯಲ್ಲಿದ್ದು, ಸಾರ್ವಜನಿಕ ಅಹವಾಲು ಇತ್ಯರ್ಥಪಡಿಸಲು ಸಚಿವರಿಗೆ ನೇರವಾದರು. ಜನತಾ ದರ್ಶನದಲ್ಲಿ ವಿವಿಧ ನಗರ, ಗ್ರಾಮಗಳ ನಾಗರಿಕರು, ಸಂಘ ಸಂಸ್ಥೆಗಳ ಪ್ರತಿನಿಧಿಗಳು, ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು, ಸಾರ್ವಜನಿಕರು ಭಾಗವಹಿದ್ದರು.

ಶಿರಸ್ತೆದಾರ ಮಲ್ಲಿಕಾರ್ಜುನ ಸೊಲಗಿ ಸ್ವಾಗತಿಸಿ, ಸಭೆ ನಿರ್ವಹಿಸಿದರು. ಶಿರಸ್ತೆದಾರರಾದ ಶ್ರೀಧರ ಕೆ ವಂದಿಸಿದರು. ಸಹಾಯಕ ನಿರ್ದೇಶಕ ರಾಜಶೇಖರ ಕಂಟೆಪ್ಪಗೌಡರ ಸಾರ್ವಜನಿಕ ಅಹವಾಲಗಳನ್ನು ಕ್ರೋಢೀಕರಿಸಿ, ಜನತಾ ದರ್ಶನ ನಿರ್ವಹಿಸಿದರು.

---

ಸಹಕಾರ ಸಂಘಗಳ ಮುಖ್ಯ ಕಾರ್ಯನಿರ್ವಾಹಕರುಗಳಿಗೆ ತರಬೇತಿ ಕಾರ್ಯಕ್ರಮ

# ಸಹಕಾರ ಸಂಘಗಳ ಮೂಲಕ ಪೂರಕ ಯೋಜನೆ



ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಸಿ.ಎಂ. ಪಾಟೀಲ ಮಾತನಾಡುತ್ತಾ, ಗ್ರಾಮೀಣ ಜನರಿಗೆ ಅವರ ಮನೆ ಬಾಗಿಲಿಗೆ ಕಡಿಮೆ ವೆಚ್ಚದ ಸೇವೆಗಳು, ಹೆಚ್ಚಿನ ವ್ಯಾಪ್ತಿ ಮತ್ತು ಸಾಲ ವಿತರಣೆಯ ಸುಧಾರಣೆಗಾಗಿ ಸಹಕಾರಿ ಸಂಘ ಇತರ ಸರ್ಕಾರಿ ಮತ್ತು ಹಣಕಾಸು ಸಂಸ್ಥೆಗಳಲ್ಲಿ ಕಾರ್ಯವಿಧಾನ, ಹೊಸ ವ್ಯವಹಾರಗಳು ಮತ್ತು ಆದಾಯ ಉತ್ಪಾದನೆಯ ಅವಕಾಶಗಳನ್ನು ಕಲ್ಪಿಸುವುದು ಮತ್ತು ಬದಲಾವಣೆಯನ್ನು ತರುವುದು ಈ ತಬೇತಿಯ ಉದ್ದೇಶವಾಗಿದೆ ಎಂದು ಹೇಳಿದರು.

**■ವಿಜಯಸಾಕ್ಷಿ ಸುದ್ದಿ, ಗದಗ**

ಗ್ರಾಮೀಣ ಜನರಿಗೆ ನೆರವಾಗುವ ದೃಷ್ಟಿಯಿಂದ ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಯೋಜನೆಗಳನ್ನು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಮುಖಾಂತರ ರೂಪಿಸಲಾಗಿದೆ. ಈ ಮೂಲಕ ಹೆಚ್ಚಿನ ಪ್ರಮಾಣದಲ್ಲಿ ಗ್ರಾಹಕರಿಗೆ ಸಾಲ ಸೌಲಭ್ಯ ನೀಡುವುದು, ಹೆಚ್ಚು ಠೇವಣಿಗಳನ್ನು ಸಂಗ್ರಹಿಸುವ ಮೂಲಕ ರೈತರಿಗೆ ರಸಗೊಬ್ಬರಗಳನ್ನು, ಕೃಷಿ ಉಪಕರಣಗಳನ್ನು ವಿತರಿಸುವುದು, ಹೀಗೆ ಹತ್ತು ಹಲವಾರು ಯೋಜನೆಗಳನ್ನು ರೂಪಿಸುವ ನಿಟ್ಟಿನಲ್ಲಿ ನಮ್ಮ ಸಹಕಾರ ಸಂಘಗಳು ಮುನ್ನಡೆಯುತ್ತಿವೆ ಎಂದು ಕೆ.ಸಿ.ಸಿ ಬ್ಯಾಂಕ್ ಧಾರವಾಡ ಹಾಗೂ ಗದಗ ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕರಾದ ಎಂ.ಎಫ್. ಕಲಗುಡಿ ಹೇಳಿದರು.

ಸಹಕಾರ ಇಲಾಖೆ ಗದಗ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಗದಗ ಜಿಲ್ಲಾ ಸಹಕಾರ ಯೂನಿಯನ್, ಕೆ.ಸಿ.ಸಿ ಬ್ಯಾಂಕ್ ಧಾರವಾಡ ಇವರುಗಳ ಸಂಯುಕ್ತ ಆಶ್ರಯದಲ್ಲಿ ಗದಗ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಮುಖ್ಯ ಕಾರ್ಯನಿರ್ವಾಹಕರುಗಳಿಗೆ ಹಮ್ಮಿಕೊಂಡಿದ್ದ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕೃಷಿ ಅಧಿಕಾರಿಗಳಾದ ಚೈತ್ರಾ ಬಿ.ಎಂ, ಸಂಜೀವಕುಮಾರ ನೆಗಳೂರು ಮಾತನಾಡಿದರು. ಕಾರ್ಯಕ್ರಮದಲ್ಲಿ ಗದಗ ಜಿಲ್ಲೆಯ ಸಹಕಾರ ಸಂಘಗಳ ಉಪನಿಬಂಧಕಿ ಎಸ್.ಎಸ್. ಕಬಾಡೆ, ಸಹಾಯಕ ನಿಬಂಧಕಿ ಪುಷ್ಪಾ ಕೆ.ಕಡಿವಾಳ, ಶಿರಹಟ್ಟಿ ಸಹಕಾರ ಅಭಿವೃದ್ಧಿ ಅಧಿಕಾರಿ ಕೆ.ಸಿ. ಕೂಸನೂರಮಠ, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಛೇರಿಯ ಮಾರಾಟಾಧಿಕಾರಿ ಬಿ.ಆರ್. ನಿಡಗುಂದಿ, ಪ್ರಶಾಂತ ಮುಧೋಳ, ಕೆ.ಸಿ.ಸಿ. ಬ್ಯಾಂಕ್‌ನ ಎಸ್.ಎಂ. ಚಿಕ್ಕಮಠ, ಡಿ.ಬಿ. ದೊಕ್ಕಣ್ಣವರ, ಕೆ.ಸಿ.ಸಿ ಬ್ಯಾಂಕ್ ನಿರೀಕ್ಷಕ ಎ.ಎ. ಶಾಬಾದಿ, ಸುನಿಲಕುಮಾರ ಚಳಗೇರಿ, ಸುರೇಶಕುಮಾರ ಎಸ್ ಉಪಸ್ಥಿತರಿದ್ದರು.

ಕಾರ್ಯಾಗಾರದಲ್ಲಿ ಮೇಘನಾ ನಾಡಗೇರ, ಬಸವರಾಜ ಎಂ.ಮುಚ್ಚಕಣ್ಣವರ, ಪ್ರಮೋದ ಕುಸುಬಿ, ಪ್ರಕಾಶ ಬೇಲಿ ಉಪನ್ಯಾಸ ನೀಡಿದರು. ಎಸ್.ವ್ಹಿ. ಗರ್ಜಪ್ಪನವರ ಪ್ರಾರ್ಥಿಸಿದರು. ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಚಂದ್ರಶೇಖರ ಎಸ್.ಕರಿಯಪ್ಪನವರ ಸ್ವಾಗತಿಸಿ ಕಾರ್ಯಕ್ರಮವನ್ನು ನಿರೂಪಿಸಿದರು. ರಶೀದಾಬಾನು ಸಿ.ಯಲಿಗಾರ ವಂದಿಸಿದರು.

---

# ಫೆ. 27ರಂದು ಸಾಧಕರಿಗೆ, ಕಾರ್ಮಿಕರಿಗೆ ಸನ್ಮಾನ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಫೆ. 27ರಂದು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಕರ್ನಾಟಕ ರಾಜ್ಯದ ಕಾರ್ಮಿಕ ಸಚಿವರಾಗಿರುವ ಸಂತೋಷ ಲಾಡ್ ಅವರ 52ನೇ ಜನ್ಮ ದಿನವಿದೆ. ಅಂದು ನರೇಗಲ್ಲ ಪಟ್ಟಣದಲ್ಲಿ ಸಾಧಕರಿಗೆ ಮತ್ತು ಕಾರ್ಮಿಕರಿಗೆ ಸನ್ಮಾನ ಸಮಾರಂಭ ಜರುಗಲಿದೆ ಎಂದು ಸಂಜೀವಿನಿ ಜೀವ ರಕ್ಷಕ ಟ್ರಸ್ಟ್‌ನ ಗದಗ ಜಿಲ್ಲಾ ಅಧ್ಯಕ್ಷ ಶಿವಾನಂದ ಗೋಗೇರಿ ತಿಳಿಸಿದರು.

ಈ ಕುರಿತು ವಿರಗಳನ್ನು ನೀಡಲು ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು. ಸಂಜೀವಿನಿ ಜೀವ ರಕ್ಷಕ ಟ್ರಸ್ಟ್ ವತಿಯಿಂದ ನಡೆಯಲಿರುವ ಈ ಕಾರ್ಯಕ್ರಮವು ರಾಜ್ಯದ 20 ಜಿಲ್ಲೆಗಳಲ್ಲಿ ಏಕಕಾಲಕ್ಕೆ ನಡೆಯಲಿದೆ. ಅಂದು ಅಂದಾಜು ಸಾವಿರ ಜನರಿಗೆ ಸನ್ಮಾನ ಜರುಗುವುದು ಎಂದು ತಿಳಿಸಿದರು. ಪಟ್ಟಣದ ಶ್ರೀ ಅನ್ನದಾನೇಶ್ವರ ಕಿವುಡ ವಸತಿಯುತ ಶಾಲೆಯ ಮಕ್ಕಳಿಗೆ ಅನ್ನಸಂತರ್ಪಣೆ, ಸರಕಾರಿ ಆಸ್ಪತ್ರೆಯಲ್ಲಿನ ರೋಗಿಗಳಿಗೆ ಹಣ್ಣು-ಹಂಪಲ ವಿತರಣೆ ಮುಂತಾದ ವಿಧಾಯಕ ಕಾರ್ಯಕ್ರಮಗಳ ಮೂಲಕ ಸಚಿವ ಲಾಡ್ ಅವರ ಜನ್ಮ ದಿನೋತ್ಸವವನ್ನು ಆಚರಿಸಲಾಗುವುದು ಎಂದು ಗೋಗೇರಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಬೋವಿ ಸಮಾಜದ ಅಧ್ಯಕ್ಷ ಪೋತರಾಜ ಮಣ್ಣೊಡ್ಡರ, ಗಣೇಶ ನವಲಗುಂದ, ಹನುಮಂತ ಕರಮುಡಿ, ಹಸನಸಾಬಕೊಪ್ಪಳ ಮುಂತಾದವರಿದ್ದರು.

---

# ಕಟ್ಟಡ ಮಾಲಕರ ಗಮನಕ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

2025-26ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯಕ್ಕೆ 100 ವಿದ್ಯಾರ್ಥಿಗಳಿಗೆ ಬೇಕಾಗುವ ಬಾಡಿಗೆ ಕಟ್ಟಡಗಳು ಅವಶ್ಯವಿದ್ದು, ವಿದ್ಯಾರ್ಥಿಗಳಿಗೆ ಸ್ಥಳಾವಕಾಶ ಇರುವ ಪ್ರತ್ಯೇಕ ಕೊಠಡಿಗಳು, ಶೌಚಾಲಯ, ಸ್ನಾನಗೃಹ, ವಿಶಾಲವಾದ ಅಡುಗೆ ಮನೆ, ವಿದ್ಯುತ್ ಸೌಲಭ್ಯ, ಬೋರ್‌ವೆಲ್ ಹೊಂದಿರಬೇಕು.

ಕಟ್ಟಡವನ್ನು ಬಾಡಿಗೆ ರೂಪದಲ್ಲಿ ಕೊಡಲು ▶▶3ನೇ ಪುಟಕ್ಕೆ

---

ಲಕ್ಷ್ಮೇಶ್ವರ ಉತ್ತರ ಕ್ಲಸ್ಟರ್ ಮಟ್ಟದ ಎಫ್‌ಎಲ್‌ಎನ್ ಕಲಿಕಾ ಹಬ್ಬದ ಸ್ಪರ್ಧಾ ಕಾರ್ಯಕ್ರಮ

# ಕಲಿಕಾ ಹಬ್ಬದಿಂದ ಹೊಸ ಕಲಿಕೆಗೆ ಪ್ರೇರಣೆ



ಕ.ರಾ.ಸ.ನೌ ಸಂಘದ ಅಧ್ಯಕ್ಷ ಗುರುರಾಜ ಹವಳದ ಮತ್ತು ಕ.ರಾ.ಪ್ರಾ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಎಸ್. ಹರ್ಲಾಪುರ ಮಾತನಾಡಿ, ಕಲಿಕೆಯಲ್ಲಿ ಹಿಂದಿರುವ ಮಕ್ಕಳು ತಮ್ಮ ಮೂಲ ಸಾಮರ್ಥ್ಯವನ್ನು ಸಾಧಿಸಲು ಇದು ತುಂಬಾ ಸಹಕಾರಿಯಾಗಿದೆ. ಮಕ್ಕಳ ಪಾಲಕರು, ಸರ್ಕಾರಿ ಶಾಲೆಗಳ ಬಗ್ಗೆ ಒಲವು ತೋರಿಸಿ, ಆದಷ್ಟು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ದಾಖಲಿಸಬೇಕು. ಇಂತಹ ಕಾರ್ಯಕ್ರಮಗಳಲ್ಲಿ ಪಾಲಕರು ಭಾಗವಹಿಸುವಂತೆ ಮಾಡಬೇಕು ಎಂದು ಹೇಳಿದರು.

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಲಕ್ಷ್ಮೇಶ್ವರ ಉತ್ತರ ಕ್ಲಸ್ಟರ್ ಮಟ್ಟದ ಎಫ್‌ಎಲ್‌ಎನ್ ಕಲಿಕಾ ಹಬ್ಬದ ಸ್ಪರ್ಧಾ ಕಾರ್ಯಕ್ರಮವನ್ನು ಸರಕಾರಿ ಹಿರಿಯ ಮಾದರಿ ಪ್ರಾಥಮಿಕ ಶಾಲೆ ನಂ.1ರಲ್ಲಿ ಮಂಗಳವಾರ ಆಯೋಜಿಸಲಾಗಿತ್ತು.

ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯ್ಕ್ ಮಾತನಾಡಿ, ಪಾಲಕರು ಮಕ್ಕಳೊಂದಿಗೆ ಬೆರೆತು ಕಲಿಕೆಯ ದೃಢೀಕರಣ ನೀಡುವ ಉತ್ತೇಜಕ ಕಾರ್ಯಕ್ರಮ ಇದಾಗಿದೆ. ಹಬ್ಬದ ವಾತಾವರಣದಲ್ಲಿ ವಿವಿಧ ಶಾಲೆಯ ಮಕ್ಕಳು, ಪಾಲಕರು, ಶಿಕ್ಷಕರು ಎಸ್‌ಡಿಎಂಸಿಯ ಸಹಭಾಗಿತ್ವದಲ್ಲಿ ಮಕ್ಕಳ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹ ನೀಡುವುದು, ಆತ್ಮವಿಶ್ವಾಸ ಬೆಳೆಸುವುದು, ಶಾಲೆಯ ಸಾಧನೆಗಳ ಚಿತ್ರಣ ಅನಾವರಣಗೊಳಿಸುವ ಸದಾಶಯವೇ ಕಲಿಕಾ ಹಬ್ಬವಾಗಿದೆ. ಇದರಲ್ಲಿ ಮಕ್ಕಳು ಉತ್ಸಾಹದಿಂದ ಪಾಲ್ಗೊಂಡು ತಮ್ಮ ಪ್ರತಿಭೆಯನ್ನು ಬೆಳಗುವದರ ಜೊತೆಗೆ ಹೊಸ ಹೊಸ ಕಲಿಕೆಗೆ ಪ್ರೇರಣೆ ದೊರೆತಂತಾಗುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಸ್‌ಡಿಎಂಸಿ ಅಧ್ಯಕ್ಷ ಯಲ್ಲಪ್ಪ ಶಿರಬಡಗಿ ವಹಿಸಿದ್ದರು. ವೇದಿಕೆಯಲ್ಲಿ ಇಸಿಓ ರಾಘವೇಂದ್ರ ಜೋಶಿ, ಆರ್.ಬಿ. ಪವಾರ, ಎಮ್.ಡಿ. ವಾರದ, ಬಸವರಾಜ ಕುಂಬಾರ, ಚಂದ್ರಕಾಂತ ನೇಕಾರ, ಬಿಆರ್‌ಪಿ ಬಿ.ಎಮ್. ಯರಗುಪ್ಪಿ, ಎಮ್.ಎ. ನದಾಫ್, ಬಿ.ಬಿ. ಯತ್ನಳ್ಳಿ, ಎ.ಎಮ್. ಅಕ್ಕಿ, ಎಸ್.ಡಿ. ಲಮಾಣಿ, ಸಿಆರ್‌ಪಿಗಳಾದ ಸಿ.ವಿ. ವಡಕಣ್ಣವರ, ಆರ್.ಮಹಾಂತೇಶ, ಎನ್.ಎ. ಮುಲ್ಲಾ, ಗಿರೀಶ್ ನೇಕಾರ, ತಿರಕಪ್ಪ ಪ್ರಜಾರ, ನವೀನ ಅಂಗಡಿ, ಜ್ಯೋತಿ ಗಾಯಕವಾಡ, ಶ್ರೀನಿವಾಸ ಮತ್ತೂರ, ಸತೀಶ ಬೊಮಲೆ, ಎಫ್.ಎಚ್. ನದಾಫ್, ಎಸ್. ಎಸ್. ಮಹಾಲಿಂಗಶೆಟ್ಟರ, ಈ.ಎಚ್. ಪೀಟರ್, ಅಕ್ಷತಾ ಕಾಟೇಗಾರ, ಕುದಿಯಾಆಶ್ಮೀನ್ ನದಾಫ್ ಮುಂತಾದವರಿದ್ದರು.

ಉತ್ತರ ಕ್ಲಸ್ಟರ್ ಸಿಆರ್‌ಪಿ ಉಮೇಶ ನೇಕಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ಮುಖ್ಯೋಪಾಧ್ಯಾಯ ಡಿ.ಎನ್. ದೊಡ್ಡಮನಿ ಸ್ವಾಗತಿಸಿದರು. ಆರ್.ಬಿ. ಅಡರಕಟ್ಟಿ ಮತ್ತು ಎನ್.ಎಸ್. ಬಂಕಾಪುರ ನಿರೂಪಿಸಿದರು. ಎಸ್. ಎಮ್. ಬೊಮಲೆ ವಂದಿಸಿದರು.

---

ಮಹಿಳಾ ಪತ್ರಕರ್ತರಿಗೆ ರಾಜ್ಯಮಟ್ಟದ ಗೌರವ

# ಗದಗದಲ್ಲಿ 'ದತ್ತಿ ನಿಧಿ' ಪ್ರಶಸ್ತಿ ಪ್ರದಾನ ನಾಳೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಮಹಿಳಾ ಪತ್ರಕರ್ತರಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಅವ್ವ ಸೇವಾ ಟ್ರಸ್ಟ್ ಸ್ಥಾಪಿಸಿರುವ ಪ್ರತಿಷ್ಠಿತ 'ದತ್ತಿ ನಿಧಿ' 2025ನೇ ಸಾಲಿನ ಪ್ರಶಸ್ತಿ ಪ್ರದಾನ ಸಮಾರಂಭ ಫೆ.26ರಂದು ಗುರುವಾರ ಬೆಳಿಗ್ಗೆ 10.30ಕ್ಕೆ ನಗರದ ಹೊರವಲಯದ ಗ್ರಾಮ ಗಂಗೋತ್ರಿ ಆವರಣದಲ್ಲಿರುವ ಮಹಾತ್ಮ ಗಾಂಧಿ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕೌಶಲ್ಯ ವಿಕಾಸ ಭವನದ ಸಭಾಂಗಣದಲ್ಲಿ ನಡೆಯಲಿದೆ. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕಾ.ಕಾ.ನಿ.ಪ) ಗದಗ ಜಿಲ್ಲಾ ಘಟಕದ ಆಶ್ರಯದಲ್ಲಿ, ಅವ್ವ ಸೇವಾ ಟ್ರಸ್ಟ್ ವತಿಯಿಂದ ಮಾತೋಶ್ರೀ ಗಂಗವ್ವ ಶಿವಲಿಂಗಪ್ಪ ಹೊರಟ್ಟಿ ಅವರ ಸ್ಮರಣಾರ್ಥ ಸ್ಥಾಪಿಸಲಾದ ಈ ಪ್ರಶಸ್ತಿ ಕಾರ್ಯಕ್ರಮದ ಘನ ಉಪಸ್ಥಿತಿಯನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ



ವಹಿಸಲಿದ್ದಾರೆ. ಕಾರ್ಯಕ್ರಮವನ್ನು ಉದ್ಘಾಟಿಸಲಿರುವ ರಾಜ್ಯದ ಕಾನೂನು ಮತ್ತು ಪ್ರವಾಸೋದ್ಯಮ ಇಲಾಖೆ ಸಚಿವರೂ ಆಗಿರುವ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್ ಕೆ ಪಾಟೀಲ್ ಅವರು ಪ್ರಶಸ್ತಿ ಪ್ರದಾನ ಮಾಡುವರು. ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ ವಿ ಪ್ರಭಾಕರ್ ಅವರು ಕಾನಿಪ ಸಂಸ್ಥಾಪಕ ಅಧ್ಯಕ್ಷ ಡಿ.ವಿ. ಗುಂಡಪ್ಪನವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಲಿದ್ದಾರೆ.

ಕಾ.ಕಾ.ನಿ.ಪ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ದಿಕ್ಸೂಚಿ ಭಾಷಣ ಮಾಡಲಿದ್ದು, ಜಿಲ್ಲಾ ಅಧ್ಯಕ್ಷ ರಾಜು ಎಂ. ಹೆಬ್ಬಳ್ಳಿ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ ಎಸ್ ಪಾಟೀಲ್ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ ಆರ್ ಪಾಟೀಲ್ ನರಗುಂದ ಶಾಸಕ ಸಿ ಸಿ ಪಾಟೀಲ್, ವಿಧಾನ ಪರಿಷತ್ ಸದಸ್ಯ ಸಲಿಂ ಅಹ್ಮದ್ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ. ವಿಶೇಷ ಆಹ್ವಾನಿತರಾಗಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ವಿಶ್ವವಿದ್ಯಾಲಯದ ಕುಲಪತಿ (ಪ್ರ) ಪ್ರೊ. ಸುರೇಶ ನಾಡಗೌಡರ, ಅವ್ವ ಸೇವಾ ಟ್ರಸ್ಟ್ ಕಾರ್ಯದರ್ಶಿ ಶಶಿ ಸಾಲಿ ಸೇರಿದಂತೆ ಗಣ್ಯರು ಉಪಸ್ಥಿತರಿರುವರು ಎಂದು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪತ್ರಕರ್ತೆ ತನುಜಾ ನಾಯಕ್‌ಗೆ 'ದತ್ತಿ ನಿಧಿ' ಗೌರವ

2025ನೇ ಸಾಲಿನ 'ದತ್ತಿ ನಿಧಿ' ಪ್ರಶಸ್ತಿಯನ್ನು ಸಂಯುಕ್ತ ಕರ್ನಾಟಕ ದಿನಪತ್ರಿಕೆಯ ಹುಬ್ಬಳ್ಳಿಯಲ್ಲಿ ಹಿರಿಯ ಉಪ ಸಂಪಾದಕರಾಗಿ ಕಾರ್ಯನಿರ್ವಹಿಸುತ್ತಿರುವ ಪತ್ರಕರ್ತೆ ತನುಜಾ ನಾಯಕ್ ಅವರಿಗೆ ಪ್ರದಾನ ಮಾಡಲಾಗುತ್ತಿದೆ. ಗ್ರಾಮೀಣಾಭಿವೃದ್ಧಿ ಹಾಗೂ ಸಾಮಾಜಿಕ ವಿಷಯಗಳ ಕುರಿತಾಗಿ ನಿರಂತರ ವರದಿ, ವಿಶ್ಲೇಷಣೆಗಳ ಮೂಲಕ ಗುರುತಿಸಿಕೊಂಡಿರುವ ತನುಜಾ ನಾಯಕ್ ಅವರ ಸಾಧನೆಯನ್ನು ಈ ಪ್ರಶಸ್ತಿ ಮಾನ್ಯಗೊಳಿಸುತ್ತಿದೆ. ಮಹಿಳಾ ಪತ್ರಕರ್ತೆಯರಿಗೆ ಪ್ರೋತ್ಸಾಹ ನೀಡುವ ದಿಕ್ಕಿನಲ್ಲಿ ಈ ಪ್ರಶಸ್ತಿ ಮಹತ್ವದ ಹೆಜ್ಜೆಯಾಗಿದೆ.



ಲಕ್ಷ್ಮೇಶ್ವರದ ಅಂಚೆ ಇಲಾಖೆಯ ಅಧಿಕಾರಿ, ಯುವ ಬರಹಗಾರ ಸುರೇಶ ತಂಗೋಡ ಅವರ 'ಅಂಗೈಯಲ್ಲಿ ಅಂಚೆ' (ಹನಿಗವಿತೆಗಳ ಸಂಕಲನ) ಇತ್ತೀಚೆಗೆ ಯಳವತ್ತಿಯಲ್ಲಿ ನಡೆದ 2ನೇ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಲೋಕಾರ್ಪಣೆಗೊಂಡಿತು. ಶಿರಹಟ್ಟಿಯ ಶ್ರೀ ಫಕ್ಕಿರೇಶ್ವರ ಸಂಸ್ಥಾನ ಮಠದ ಶ್ರೀ ಫಕೀರ ದಿಂಗಾಲೇಶ್ವರ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಸಮ್ಮೇಳನದ ಸರ್ವಾಧ್ಯಕ್ಷರಾದ ಲಲಿತಮ್ಮ ಕೆರಿಮನಿ ಅವರು ಕೃತಿಯನ್ನು ಬಿಡುಗಡೆಗೊಳಿಸಿದರು.



ಲಕ್ಷ್ಮೇಶ್ವರ ತಾಲೂಕಿನ ಅಕ್ಕಿಗುಂದ ಗ್ರಾಮದ ಕಾಂಗ್ರೆಸ್ ಪಕ್ಷದ ಕಾರ್ಯಕರ್ತ ಚಂದ್ರಪ್ಪ ಹೆಗ್ಗಪ್ಪ ದೊಡಮನಿ ಇವರನ್ನು ಜಿಲ್ಲಾ ಕಾಂಗ್ರೆಸ್ ಸಮಿತಿ ಪರಿಶಿಷ್ಟ ಜಾತಿ ವಿಭಾಗದ ಜಿಲ್ಲಾ ಉಪಾಧ್ಯಕ್ಷರನ್ನಾಗಿ ಕರ್ನಾಟಕ ರಾಜ್ಯ ಪ್ರದೇಶ ಕಾಂಗ್ರೆಸ್ ಸಮಿತಿ ಪರಿಶಿಷ್ಟ ವಿಭಾಗದ ರಾಜ್ಯ ಅಧ್ಯಕ್ಷರಾದ ಆರ್. ಧರ್ಮಸೇನಾ ನೇಮಕ ಮಾಡಿ ಆದೇಶ ಪತ್ರ ನೀಡಿದರು. ಈ ಸಂದರ್ಭದಲ್ಲಿ ಕೆಪಿಸಿಸಿ ಸದಸ್ಯೆ ಸುಜಾತಾ ದೊಡ್ಡಮನಿ ಇದ್ದರು.

'ಮಿಷನ್ ಪ್ರಕೃತಿ' ರಾಜ್ಯ ಮಟ್ಟದ ಪ್ರಶಸ್ತಿ ಸ್ವೀಕರಿಸಿದ ಜೋಡಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ

# ಸಚಿವ ಮಧು ಬಂಗಾರಪ್ಪರಿಂದ ಪ್ರಶಸ್ತಿ ಪ್ರದಾನ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಭೂಮಿಯ ನೈಸರ್ಗಿಕ ಅವನತಿಯನ್ನು ನಿಲ್ಲಿಸುವುದು ಮತ್ತು ಮಾನವರು ಪ್ರಕೃತಿಯೊಂದಿಗೆ ಸಾಮರಸ್ಯದಿಂದ ಬದುಕುವ ಭವಿಷ್ಯವನ್ನು ನಿರ್ಮಿಸುವ ಉದ್ದೇಶದಿಂದ ಸಮಗ್ರ ಶಿಕ್ಷಣ ಕರ್ನಾಟಕ ಬೆಂಗಳೂರು ಮತ್ತು ವರ್ಲ್ಡ್‌ವೈಲ್ಡ್ ಫಂಡ್ ಫಾರ್ ನೇಚರ್ (ಡಬ್ಲ್ಯುಡಬ್ಲ್ಯುಎಫ್-ಇಂಡಿಯಾ) ಇವರ ಸಹಯೋಗದೊಂದಿಗೆ ಕರ್ನಾಟಕ ರಾಜ್ಯದ 5 ಸಾವಿರ ಸರ್ಕಾರಿ ಶಾಲೆಗಳಲ್ಲಿ 2025-26ನೇ ಸಾಲಿನಲ್ಲಿ ಮಿಷನ್ ಪ್ರಕೃತಿ ಕಾರ್ಯಕ್ರಮವನ್ನು ಹಮ್ಮಿಕೊಂಡು ಶಾಲಾ ಮಕ್ಕಳಿಗೆ ಪರಿಸರ ಸಂರಕ್ಷಣೆ ಕುರಿತು ಜಾಗೃತಿ ಮೂಡಿಸುವ ಚಟುವಟಿಕೆಗಳನ್ನು ಶಾಲಾ ಹಂತದಲ್ಲಿ ಆಯೋಜಿಸಲಾಗಿತ್ತು.

ಮಿಷನ್ ಪ್ರಕೃತಿ ಕಾರ್ಯಕ್ರಮವು ಶಿಕ್ಷಕರ ಸಹಕಾರದೊಂದಿಗೆ ವಿದ್ಯಾರ್ಥಿಗಳೇ ನಡೆಸುವ ವಿಶಿಷ್ಟ ಕಾರ್ಯಕ್ರಮವಾಗಿದ್ದು, ಶಾಲೆ ಮನೆ ಮತ್ತು ಸಮುದಾಯಗಳಲ್ಲಿ ಪರಿಸರ ಸಂರಕ್ಷಣೆ ಕುರಿತು ಜವಾಬ್ದಾರಿಯುತ ಅಭ್ಯಾಸಗಳನ್ನು ಪ್ರಾಯೋಗಿಕವಾಗಿ ಮಾಡಿ ತಿಳಿದುಕೊಂಡು ಅನುಷ್ಠಾನ ಮಾಡುವುದಾಗಿದೆ. ಈ ಕಾರ್ಯಕ್ರಮವು ಐದು ಪ್ರಮುಖ ಕ್ಷೇತ್ರಗಳಾದ ಜೀವ ವೈವಿಧ್ಯ, ನೀರು, ತ್ಯಾಜ್ಯ, ಆಹಾರ ಮತ್ತು ಶಕ್ತಿ ಎಂಬ ವಿಷಯಗಳ ಅಡಿಯಲ್ಲಿ ಮಕ್ಕಳು ಪ್ರಾಯೋಗಿಕವಾಗಿ ಶಾಲೆ ಹಾಗೂ ಸಮುದಾಯದ ಆಡಿಟ್ ಕೈಗೊಂಡು ಸಮಸ್ಯೆಗಳನ್ನು ಗುರುತಿಸುವುದು ಹಾಗೂ ಗುರುತಿಸಿದ ಸಮಸ್ಯೆಗಳಿಗೆ ಪರಿಹಾರಗಳನ್ನು ಸೂಚಿಸುವುದು ಮತ್ತು ಪರಿಹಾರೋಪಾಯಗಳನ್ನು ಅನುಷ್ಠಾನಗೊಳಿಸುವುದರ ಮೂಲಕ ಚಿಕ್ಕ ವಯಸ್ಸಿನಲ್ಲಿಯೇ ಪರಿಸರ ಸಂರಕ್ಷಣೆ ಕುರಿತು ಜವಾಬ್ದಾರಿ ಮೂಡಿಸುವುದಾಗಿದೆ.

ಮಕ್ಕಳು ಕೈಗೊಂಡ ಎಲ್ಲಾ ಕಾರ್ಯಗಳ ಮಾಹಿತಿಯನ್ನು ಸ್ಯಾಟ್ಸ ಪೋರ್ಟಲ್‌ನಲ್ಲಿ ಅಪ್ಲೋಡ್ ಮಾಡಲು ಅವಕಾಶ ಕಲ್ಪಿಸಲಾಗಿತ್ತು. ಅಪ್ಲೋಡ್ ಮಾಡಲಾದ ಎಲ್ಲಾ ಶಾಲೆಗಳ ಮಾಹಿತಿಯನ್ನು ಮೌಲ್ಯಮಾಪನ ಕೈಗೊಂಡ ನಂತರ 5 ಸಾವಿರ ಶಾಲೆಗಳ ಪೈಕಿ 10 ಉತ್ತಮ ಕಾರ್ಯ ನಿರ್ವಹಣೆ ಮಾಡಿದ ಶಾಲೆಗಳನ್ನು ಆಯ್ಕೆ ಮಾಡಿ ಪ್ರಶಸ್ತಿ ನೀಡಲಾಯಿತು. ಈ ಪೈಕಿ ಧಾರವಾಡ ಜಿಲ್ಲೆಯ ಕಲಘಟಗಿ ತಾಲೂಕಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಜೋಡಳ್ಳಿ ಕೂಡ ಪ್ರಶಸ್ತಿ ಪಡೆದುಕೊಂಡಿದ್ದು, ಬೆಂಗಳೂರಿನ ವಿಕಾಸ ಸೌಧದಲ್ಲಿ ಶಿಕ್ಷಣ ಸಚಿವರಾದ ಮಧು ಬಂಗಾರಪ್ಪ ಪ್ರಶಸ್ತಿ ಪ್ರದಾನ ಮಾಡಿದರು.

ಡಯಟ್‌ನ ಪ್ರಾಚಾರ್ಯ ಬಸವರಾಜ ನಾಲತವಾಡ, ಮಿಷನ್ ಪ್ರಕೃತಿ ಕಾರ್ಯಕ್ರಮದ ಜಿಲ್ಲಾ ನೋಡಲ್ ಅಧಿಕಾರಿ ಹಾಗೂ ಡಯಟ್‌ನ ಉಪನ್ಯಾಸಕರಾದ ಪ್ರಕಾಶ ಅಂಗಡಿ, ಡಯಟ್‌ನ ಎಲ್ಲಾ ಹಿರಿಯ ಉಪನ್ಯಾಸಕರು, ಕಲಘಟಗಿ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಗಾಯತ್ರಿ ದೇವಿ ಸಜ್ಜನ್, ಕ್ಷೇತ್ರ ಸಮನ್ವಯಾಧಿಕಾರಿಗಳಾದ ಪಾಂಡುರಂಗ ಪೂಜೇರಿ, ದುಮ್ಮವಾಡ ಕ್ಲಸ್ಟರ್ ಸಿಆರ್‌ಪಿ ಪ್ರಶಾಂತ್ ರೆಡ್ಡೇರ, ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷರು, ಸರ್ವ ಸದಸ್ಯರು, ದುಮ್ಮವಾಡ ಗ್ರಾಮದ ಸಮಸ್ತ ನಾಗರಿಕರು, ಹಿರಿಯರು ಮಿಷನ್ ಪ್ರಕೃತಿ ಕಾರ್ಯಕ್ರಮ ಅನುಷ್ಠಾನಗೊಳಿಸಿದ ಎಲ್ಲರಿಗೂ ಅಭಿನಂದನೆಗಳನ್ನು ತಿಳಿಸಿದ್ದಾರೆ.



ಪ್ರಶಸ್ತಿಯನ್ನು ಶಾಲೆಯ ಹಸಿರುಪಡೆಯ ಮಕ್ಕಳು, ಶಾಲಾ ನೋಡಲ್ ಶಿಕ್ಷಕಿಯರಾದ ಪ್ರತಿಭಾ ದೊಡಮನಿ, ಮುಖ್ಯೋಪಾಧ್ಯಾಯ ಎಮ್.ಎ. ಸುಂಕದ, ಶಾಲೆಯ ಎಸ್‌ಡಿಎಮ್‌ಸಿ ಅಧ್ಯಕ್ಷರು ಹಾಗೂ ಸದಸ್ಯರು, ಮಿಷನ್ ಪ್ರಕೃತಿ ಕಾರ್ಯಕ್ರಮದ ತಾಲೂಕಾ ನೋಡಲ್ ಅಧಿಕಾರಿ ಸುಜಾತ ಚವ್ಹಾಣ ಸ್ವೀಕರಿಸಿದರು. ಆಯುಕ್ತರು ಶಾಲಾ ಶಿಕ್ಷಣ ಇಲಾಖೆ ಬೆಂಗಳೂರು, ನಿರ್ದೇಶಕರು ಶಾಲಾ ಶಿಕ್ಷಣ ಇಲಾಖೆ ಗುಣಮಟ್ಟ ಹಾಗೂ ಡಬ್ಲ್ಯುಡಬ್ಲ್ಯುಎಫ್ ಸಂಸ್ಥೆಯ ಮುಖ್ಯಸ್ಥರು ಹಾಗೂ ಇತರ ಸದಸ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ನಾಲತ್ತವಾಡದ ವೀರೇಶ್ವರ ಶರಣರ ಜಯಂತ್ಯುತ್ಸವ, ಮಹಾರಥೋತ್ಸವ ಕಾರ್ಯಕ್ರಮ

# ಪ್ರತಿಯೊಬ್ಬರೂ ಒತ್ತಡದಲ್ಲಿಯೇ ಬದುಕುವಂತಾಗಿದೆ



ಅಡ್ನೂರು ದಾಸೋಹ ಮಠದ ಅಭಿನವ ಪಂಚಾಕ್ಷರ ಶಿವಾಚಾರ್ಯ ಸ್ವಾಮೀಜಿ ಸಾನ್ನಿಧ್ಯ ವಹಿಸಿ ಮಾತನಾಡಿ, ವೀರೇಶ್ವರ ಶರಣರು ಪ್ರತಿನಿತ್ಯ ಕೇವಲ ಐದು ಮನೆಗೆ ಭಿಕ್ಷೆಗೆ ಹೋಗುತ್ತಿದ್ದರು. ಭಿಕ್ಷೆಯಲ್ಲಿ ಬಂದ ಕಾಳು-ಕಡಿಗಳನ್ನು ಮೊದಲು ಜಂಗಮರಿಗೆ ಪ್ರಸಾದ ವಿತರಿಸಿ ಉಳಿದರೆ ಸ್ವೀಕರಿಸುತ್ತಿದ್ದರು, ಇಲ್ಲವಾದಲ್ಲಿ ಉಪವಾಸವಿರುತ್ತಿದ್ದರು.

ಅಂತಹ ಮಹಾಮಹಿಮ ಶರಣರ ಜಯಂತ್ಯುತ್ಸವ ಆಚರಿಸುತ್ತಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು.

**■ವಿಜಯಸಾಕ್ಷಿ ಸುದ್ದಿ, ಗದಗ**

ಆಧುನಿಕ ದಿನಮಾನವು ಎಐ ತಂತ್ರಜ್ಞಾನದತ್ತ ಹೊರಳುತ್ತಿದೆ. ಪ್ರತಿಯೊಬ್ಬರೂ ಒತ್ತಡದಲ್ಲಿಯೇ ಬದುಕುವಂತಾಗಿದ್ದು, ಸಮಯ ಸಿಕ್ಕಾಗೆಲ್ಲ ಶಿವಧ್ಯಾನ, ಪ್ರಾರ್ಥನೆ ಹಾಗೂ ಭಕ್ತಿ ಮಾರ್ಗದಲ್ಲಿ ನಡೆಯುವ ಮೂಲಕ ಸಂತೃಪ್ತ ಜೀವನ ನಡೆಸಬೇಕು ಎಂದು ಶಿವಕುಮಾರ ಶರಣರು ಹೇಳಿದರು.

ತಾಲೂಕಿನ ನರಸಾಪೂರ ಗ್ರಾಮದ ನಾಲತವಾಡ ವೀರೇಶ್ವರ ಶರಣರ ಮಠದಲ್ಲಿ ವೀರೇಶ್ವರ ಶರಣರ ಜಯಂತ್ಯುತ್ಸವ, ಮಹಾರಥೋತ್ಸವ ಹಾಗೂ ಚಂದ್ರಶೇಖರ ಶರಣರ 12ನೇ ಪುಣ್ಯಸ್ಮರಣೋತ್ಸವದ ಅಂಗವಾಗಿ ನಡೆದ ಧರ್ಮಸಭೆಯಲ್ಲಿ ಅವರು ಮಾತನಾಡಿದರು.

ಇಂದು ಪ್ರತಿಯೊಬ್ಬರ ಕೈಯಲ್ಲೂ ಮೊಬೈಲ್ ಇದೆ. ಅವಶ್ಯಕತೆಗನುಸಾರವಾಗಿ ಮೊಬೈಲ್ ಬಳಸಬೇಕು. ಆದರೆ, ಅಡುಗೆ, ಊಟ ಹಾಗೂ ವ್ಯವಹಾರ ಮಾಡುವಾಗಲೂ ಮೊಬೈಲ್ ಬಳಕೆ ಮಾಡುತ್ತಿದ್ದಾರೆ. ಇದರಿಂದ ಮಾಡುವ ಕಾರ್ಯಗಳೂ ಅರ್ಥಹೀನಗೊಳ್ಳುತ್ತಿವೆ. ಆದ್ದರಿಂದ ಪ್ರತಿಯೊಬ್ಬರೂ ಪಂಚಾಕ್ಷರಿ ಮಂತ್ರ ಜಪಿಸುತ್ತ ಶ್ರೇಷ್ಠ ಭಾವನೆಯಿಂದ ಅಡುಗೆ ಮಾಡಿ, ಊಟ ಮಾಡಿದಾಗ ಪ್ರಸಾದ ಸೇವಿಸಿದ ಅನುಭವವಾಗುತ್ತದೆ. ಮಾಡಿದ ಕೆಲಸಗಳೂ ಸಾರ್ಥಕಗೊಳ್ಳುತ್ತವೆ ಎಂದು ಹೇಳಿದರು.

ವರ್ಷ ಕಳೆದಂತೆ ಕುಟುಂಬದಲ್ಲಿ ಸಂಬಂಧಗಳು ಹಾಳಾಗತೊಡಗಿವೆ. ಆಸ್ತಿಗಾಗಿ ತಂದೆ-ತಾಯಿಯರನ್ನು ಪೀಡಿಸುವ ಘಟನೆಗಳು ನಡೆಯುತ್ತಿವೆ. ಮಕ್ಕಳಾದವರು ತಂದೆ-ತಾಯಿಯರನ್ನು ದೇವರಂತೆ ಕಂಡು ಅವರನ್ನೇ ಆಸ್ತಿಯನ್ನಾಗಿ ಕಾಣಬೇಕು. ಅವರ ಯೋಗಕ್ಷೇಮ ನೋಡಿಕೊಂಡು ಅವರ ಮಾರ್ಗದರ್ಶನದಲ್ಲಿ ಜೀವನ ನಡೆಸಿದಾಗ ಬಾಳು ಬಂಗಾರವಾಗುತ್ತದೆ ಎಂದು ಕಿವಿಮಾತು ಹೇಳಿದರು.

ವೀರೇಶ್ವರ ಶರಣರು ತಮ್ಮ ಕಾಯಕದ ಮೂಲಕ ಬಂದ ಹಣವನ್ನು ದಾಸೋಹ ನಡೆಸುತ್ತಿದ್ದರು. ನಂತರ ವೀರೇಶ್ವರ ಶರಣರ ಪ್ರೇರಣೆಯಿಂದ ಚಂದ್ರಶೇಖರ ಶರಣರು ನರಸಾಪೂರ ಗ್ರಾಮದಲ್ಲಿ 1974ರಲ್ಲಿ ವೀರೇಶ್ವರ ಶರಣರ ಮಠವನ್ನು ಸ್ಥಾಪಿಸಿ ನಿತ್ಯ ಪೂಜಾ ಕೈಂಕರ್ಯಗಳನ್ನು ನಡೆಸುತ್ತ, ಭಕ್ತರ ಸಮಸ್ಯೆಗಳನ್ನು ಪರಿಹರಿಸುತ್ತ ಶ್ರೀಮಠವನ್ನು ಮುನ್ನಡೆಸಿಕೊಂಡು ಬಂದರು. ಶ್ರೀಮಠದಲ್ಲಿ ಪ್ರತಿವರ್ಷ ವೀರೇಶ್ವರ ಶರಣರ ಜಯಂತ್ಯುತ್ಸವ ಹಾಗೂ ಚಂದ್ರಶೇಖರ ಶರಣರ ಪುಣ್ಯಸ್ಮರಣೋತ್ಸವ ಆಚರಿಸಿಕೊಂಡು ಬರಲಾಗುತ್ತಿದೆ ಎಂದರು.

ಧರ್ಮಸಭೆಗೂ ಮುನ್ನ ಬೆಳಿಗ್ಗೆ ಷಟಸ್ಥಲ ಧ್ವಜಾರೋಹಣ, ವೀರೇಶ್ವರ ಶರಣರ ಹಾಗೂ ಚಂದ್ರಶೇಖರ ಶರಣರ ಮೂರ್ತಿಗಳಿಗೆ ಮಹಾರುದ್ರಾಭಿಷೇಕ ನಂತರ ಚಂದ್ರಶೇಖರ ಶರಣರ ಪುಣ್ಯಸ್ಮರಣೋತ್ಸವ ಕಾರ್ಯಕ್ರಮ ಜರುಗಿತು. ಜಾತ್ರಾ ಮಹೋತ್ಸವದ ಅಂಗವಾಗಿ ನಡೆದ ಉಚಿತ ಆರೋಗ್ಯ ತಪಾಸಣೆ ಶಿಬಿರದಲ್ಲಿ ನೂರಾರು ಭಕ್ತರು ಪಾಲ್ಗೊಂಡರು. ಕಾರ್ಯಕ್ರಮದಲ್ಲಿ ಕಳಕಮಲ್ಲಯ್ಯ ಹಿರೇಮಠ, ಕೆ.ಎಸ್. ಹಿರೇಮಠ ಸೇರಿ ಅನೇಕರು ಇದ್ದರು. ಡಾ. ಸುಜಾತಾ ಪಾಟೀಲ ಉಚಿತ ಆರೋಗ್ಯ ಶಿಬಿರ ನಡೆಸಿಕೊಟ್ಟರು.

# ಕಡಲೆ ಖರೀದಿ ಕೇಂದ್ರಕ್ಕೆ ಚಾಲನೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಯಳವತ್ತಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಕಚೇರಿ ಆವರಣದಲ್ಲಿ ಸೋಮವಾರ ಕಡಲೆ ಬೆಂಬಲ ಬೆಲೆ ಖರೀದಿ ಕೇಂದ್ರಕ್ಕೆ ಚಾಲನೆ ನೀಡಲಾಯಿತು.

ತೂಕದ ಯಂತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಕೇಂದ್ರ ಉದ್ಘಾಟಿಸಿದ ಗ್ರಾಮದ ಹಿರಿಯರಾದ ಸಿದ್ದಲಿಂಗಯ್ಯ ಹಿರೇಮಠ ಮಾತನಾಡಿ, ಸರ್ಕಾರಕ್ಕೆ ರೈತರ ಹಿತ ಕಾಪಾಡಬೇಕು ಎಂಬ ಉದ್ದೇಶ ಇದ್ದರೆ ಬೆಂಬಲ ಖರೀದಿ ಕೇಂದ್ರ ಸದಾ ಚಾಲ್ತಿಯಲ್ಲಿ ಇರಬೇಕು. ರೈತರು ತಮಗೆ ಅವಕಾಶ ಸಿಕ್ಕಾಗ ತಮ್ಮ ಬೆಳೆಯನ್ನು ಮಾರಾಟ ಮಾಡುವತೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಯಲ್ಲಪ್ಪಗೌಡ ರಾಯನಗೌಡ್ರ ಮಾತನಾಡಿ, ಮಾರುಕಟ್ಟೆಯಲ್ಲಿ ಕಡಲೆ ದರ ಕುಸಿದಿದೆ. ಸದ್ಯ ಸರ್ಕಾರ ಕ್ವಿಂಟಲ್‌ಗೆ 5,875 ರೂಪಾಯಿ ಬೆಂಬಲ ಬೆಲೆಯಡಿ ಕಡಲೆ ಖರೀದಿಸುತ್ತಿದೆ. ಕಾರಣ ಯಳವತ್ತಿ, ಯತ್ತಿನಹಳ್ಳಿ, ಮಾಡಳ್ಳಿ ಗ್ರಾಮಗಳ ರೈತರು ತಾವು ಬೆಳೆದ ಕಡಲೆಯನ್ನು ಖರೀದಿ ಕೇಂದ್ರಕ್ಕೆ ತಂದು ಮಾರಾಟ ಮಾಡಬೇಕು. ರೈತರು ಅಗತ್ಯ ದಾಖಲೆಗಳೊಂದಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು ಎಂದರು.

ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷ ಬಸಪ್ಪ ಪಾಪಲಚ್ಚಿ, ಸುರೇಶ ಬಸಾಪೂರ, ಜಿ.ಬಿ. ಬಡಿಗೇರ, ಮಾರುದ್ರಪ್ಪ ಶಿರಬಡಗಿ, ಗೋವಿಂದಗೌಡ ಪಾಟೀಲ, ಶಂಕರಗೌಡ ನಿಂಗನಗೌಡ್ರ, ವೆಂಕರಡ್ಡಿ ಸಣ್ಣಹೊಂಬಳ, ನಿಂಗಪ್ಪ ಕಮತ, ಗಿರಿಜಮ್ಮ ಹುಬ್ಬಳ್ಳಿ, ಸಾವಿತ್ರಿ ಬೊಮ್ಮನಗೌಡ್ರ, ಸುರೇಶ ಸಿಂದಗಿ, ಬಸನಗೌಡ ಪಾಟೀಲ, ಲಕ್ಷ್ಮಣ ಕರೆಣ್ಣವರ ಮತ್ತಿತರರು ಇದ್ದರು.

# ರಕ್ತದಾನ ಶಿಬಿರ ಶ್ಲಾಘನೀಯ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಇನ್ನೊಬ್ಬರ ಜೀವ ಉಳಿಸುವಲ್ಲಿ ಅನುಕೂಲವಾಗುವ ರಕ್ತವನ್ನು ದಾನ ಮಾಡುವುದು ಮಹಾದಾನವಾಗಿದೆ. ಆದ್ದರಿಂದ ವಿಶೇಷ ಸಂದರ್ಭಗಳಲ್ಲಿ ರಕ್ತದಾನ ಶಿಬಿರಗಳನ್ನು ಏರ್ಪಡಿಸಿ ರಕ್ತ ಸಂಗ್ರಹ ಮಾಡಲಾಗುತ್ತಿದೆ ಎಂದು ಪ.ಪಂ ಮಾಜಿ ಅಧ್ಯಕ್ಷ ಸುನೀಲ ಬಸವರಡ್ಡೇರ ಹೇಳಿದರು.

ಪಟ್ಟಣದ ಡಾ. ಜಿ.ಕೆ. ಕಾಳೆಯವರ ಅಮೃತ ಮಹೋತ್ಸವದ ನಿಮಿತ್ತ ಶ್ರೀ ವೀರಪ್ಪಜ್ಜನವರ ಮಠದಲ್ಲಿ ಗದಗನ ಅಂಬಿಕಾ ರಕ್ತಕೇಂದ್ರದ ವತಿಯಿಂದ ಏರ್ಪಡಿಸಲಾಗಿದ್ದ ರಕ್ತದಾನ ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಇಂದು ಅಮೃತ ಮಹೋತ್ಸವ ಆಚರಿಸಿಕೊಳ್ಳುತ್ತಿರುವ ಡಾ. ಕಾಳೆಯವರು ಅನೇಕರ ಜೀವ ಉಳಿಸುವಲ್ಲಿ ಮಹತ್ವದ ಪಾತ್ರ ವಹಿಸಿದ್ದಾರೆ. ಅವರ ಈ ಅಮೃತ ಮಹೋತ್ಸವದ ಸಂದರ್ಭದಲ್ಲಿ ಅಂಬಿಕಾ ರಕ್ತ ಕೇಂದ್ರದವರು ರಕ್ತದಾನ ಶಿಬಿರವನ್ನು ಏರ್ಪಡಿಸುವ ಮೂಲಕ ಶ್ಲಾಘನೀಯ ಕಾರ್ಯ ಮಾಡಿದ್ದಾರೆ ಎಂದರು.

ಈವೇಳೆ ಅಂಬಿಕಾ ಕೇಂದ್ರದ ವೈದ್ಯಾಧಿಕಾರಿಗಳಾದ ಡಾ. ವಾಣಿ ನಿಲಾವರ ಮತ್ತು ಡಾ. ದತ್ತಾತ್ರೇಯ ವೈಕುಂಠೆ, ತಾಂತ್ರಿಕ ಮೇಲ್ವಿಚಾರಕ ರೋಹಿತ ಚವ್ಹಾಣ, ಡಾ. ಜಿ.ಕೆ. ಕಾಳೆ, ಉದಯ, ರವಿಚಂದ್ರ ಕ್ವಾಟಿ ಮುಂತಾದವರಿದ್ದರು. ರಕ್ತದಾನ ಶಿಬಿರದಲ್ಲಿ ಒಟ್ಟು 28 ಜನರು ರಕ್ತದಾನ ಮಾಡಿ ಮಾನವೀತೆಯನ್ನು ಮೆರೆದರು.

## ಪಿಎಂ ಕಿಸಾನ್ ಲಾಭಕ್ಕೆ ಅಂತಿಮ ಗಡುವು: ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ ಎಚ್ಚರಿಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ರೈತರು ಕೇಂದ್ರ ಸರ್ಕಾರದ ಪಿಎಮ್ ಕಿಸಾನ್ ಸಮ್ಮಾನ್ ನಿಧಿ ಯೋಜನೆಯ ಸಹಾಯಧನ ಪಡೆಯಲು ಫ್ರೂಟ್ಸ್ (FRUITS) ತಂತ್ರಾಂಶದಲ್ಲಿ ನೋಂದಣಿ ಮಾಡಿಕೊಂಡು, ತಮ್ಮ ಫ್ರೂಟ್ಸ್ ನೋಂದಣಿ ಸಂಖ್ಯೆ (ಎಫ್‌ಐಡಿ)ಗಳಿಗೆ ಎಲ್ಲಾ ಭೂಹಿಡುವಳಿಗಳನ್ನು ಫೆಬ್ರವರಿ 25ರೊಳಗೆ ಜೋಡಣೆ ಮಾಡುವುದು ಕಡ್ಡಾಯವಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕಿ ಶ್ರೀಮತಿ ಚೇತನಾ ಪಾಟೀಲ ತಿಳಿಸಿದ್ದಾರೆ.

ಕೇಂದ್ರ ಸರ್ಕಾರದ ಮಾನದಂಡಗಳ ಪ್ರಕಾರ ಭೂಹಿಡುವಳಿ ಹೊಂದಿರುವ ಜಿಲ್ಲೆಯ ಒಟ್ಟು 66,473 ರೈತರು ಫ್ರೂಟ್ಸ್ ಹಾಗೂ ಭೂಮಿ ದತ್ತಾಂಶಗಳನ್ನು ನಿಯಮಿತವಾಗಿ ಸಮೀಕರಿಸುವುದು ಅತಿ ಮುಖ್ಯವಾಗಿದೆ.

ಫ್ರೂಟ್ಸ್ ತಂತ್ರಾಂಶದಲ್ಲಿ ರೈತರ ಒಪ್ಪಿಗೆ ಹಾಗೂ ಸಹಮತಿ ಪತ್ರವನ್ನು ವಿದ್ಯುನ್ಮಾನ (ಇ-ಕನ್ಸೆಂಟ್) ರೂಪದಲ್ಲಿ ದಾಖಲಿಸುವುದೂ ಕಡ್ಡಾಯವಾಗಿದೆ.

ಈ ಪ್ರಕ್ರಿಯೆಯಿಂದ ಸೃಜಿಸಲಾದ ಕೇಂದ್ರ ನೋಂದಾಯಿತ ರೈತ ಸಂಖ್ಯೆ, ಕೇಂದ್ರ ಸರ್ಕಾರ ಜಾರಿಗೊಳಿಸುವ ಪಿಎಂ ಕಿಸಾನ್ ಸೇರಿದಂತೆ ಇತರೆ ಎಲ್ಲಾ ಕೃಷಿ ಸಂಬಂಧಿತ ಯೋಜನೆಗಳಲ್ಲಿ ಬಳಸಲಾಗುತ್ತದೆ. ಆದ್ದರಿಂದ ರೈತರು ತಮ್ಮ ಮೊಬೈಲ್ ಸಂಖ್ಯೆ, ಇ-ಕೆವೈಸಿ ಹಾಗೂ ಸಹಮತಿ ಪತ್ರದ ವಿವರಗಳನ್ನು ತಕ್ಷಣವೇ ಅಪ್‌ಲೋಡ್ ಮಾಡಬೇಕು.

ವಿವರಗಳನ್ನು ಸಮಯಕ್ಕೆ ಸರಿಯಾಗಿ ಸಲ್ಲಿಸದಿದ್ದಲ್ಲಿ ಸರ್ಕಾರದ ವಿವಿಧ ಯೋಜನೆಗಳ ಲಾಭದಿಂದ ವಂಚಿತರಾಗುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ರೈತರು ಗಂಭೀರವಾಗಿ ಪರಿಗಣಿಸಿ ತುರ್ತಾಗಿ ತಮ್ಮ ವಿವರಗಳನ್ನು ದಾಖಲಿಸಬೇಕು ಎಂದು ಪ್ರಕಟಣೆಯಲ್ಲಿ ಮನವಿ ಮಾಡಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ರೈತರು ತಮ್ಮ ಹತ್ತಿರದ ಕೃಷಿ, ತೋಟಗಾರಿಕೆ ಅಥವಾ ರೇಷ್ಮೆ ಇಲಾಖೆಯನ್ನು ಸಂಪರ್ಕಿಸಬಹುದು.

# ದಿ. ಎಚ್.ಸಿ ರಟಗೇರಿ ಸಂಸ್ಮರಣೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಸಿಬಿಎಸ್‌ಇ ಸ್ಕೂಲ್ ಚಂದನದಲ್ಲಿ ಸುಮಾರು 22 ವರ್ಷಗಳವರೆಗೆ ಗೌರವ ನಿರ್ದೇಶಕರಾಗಿ ಅನುಪಮ ಸೇವೆ ಸಲ್ಲಿಸಿದ್ದ, ತಮ್ಮ ಪಾಠದ ಮೂಲಕ ಅಸಂಖ್ಯಾತ ವಿದ್ಯಾರ್ಥಿಗಳ ಬದಕನ್ನು ಬದಲಿಸಿದ್ದ ದಿ. ಎಚ್.ಸಿ ರಟಗೇರಿ ಅವರ ಕಂಚಿನ ಪುತ್ಥಳಿಯನ್ನು ಕಳೆದ ಡಿಸೆಂಬರನಲ್ಲಿ ಮುಖ್ಯಮಂತ್ರಿ ಸಿ.ಎಂ ಸಿದ್ದರಾಮಯ್ಯನವರೇ ಅನಾವರಣಗೊಳಿಸಿದ್ದರು.

ಶಾಲೆಯ ಮಕ್ಕಳ ಪ್ರೀತಿ ಪಾತ್ರರಾಗಿದ್ದ, ಸದಾ ಮಕ್ಕಳ ಏಳಿಗೆಯನ್ನು ಬಯಸುತ್ತಿದ್ದ ದಿ. ಎಚ್.ಸಿ. ರಟಗೇರಿ ಅವರ ಪುತ್ಥಳಿಗೆ ರವಿವಾರ ಶಾಲೆಯ ನೂರಾರು ಮಕ್ಕಳು ವಿಶೇಷ ಪೂಜೆ ಸಲ್ಲಿಸಿದರು. ಈ ವೇಳೆ ಶಾಲೆಯ ಸಂಸ್ಥಾಪಕ ಟಿ.ಈಶ್ವರ ನುಡಿನಮನ ಸಲ್ಲಿಸಿದರು.

ಅನೇಕ ಮುಖಂಡರು ಹಾಗೂ ಅವರ ಅಪಾರ ಶಿಷ್ಯವೃಂದ, ಶಿಕ್ಷಕರು ಮಕ್ಕಳು ಪಾಲ್ಗೊಂಡು ಸ್ಮರಿಸಿದ ಈ ಕಾರ್ಯಕ್ರಮ ವಿಶೇಷವಾಗಿತ್ತು. ಕಾಯಕಯೋಗಿಯಾಗಿ ಜೀವನದ ಅಂತ್ಯದ ಕಾಲದವರೆಗೂ ಪಾಠ ಮಾಡುತ್ತಿದ್ದ ಅವರು ಚಂದನ ಸ್ಕೂಲ್‌ನಲ್ಲಿ ಯಾವುದೇ ರೀತಿಯ ಸಂಭಾವನೆ ಪಡೆಯದೆ ಸೇವೆ ಸಲ್ಲಿಸುತ್ತಿದ್ದರು ಎನ್ನುವದು ಗಮನಾರ್ಹವಾಗಿದೆ.

ಕಾರ್ಯಕ್ರಮದಲ್ಲಿ ಶಾಲೆಯ ನಿರ್ದೇಶಕರಾದ ಗಿರಿಜಾ ಟಿ.ಈಶ್ವರ, ಸರಸ್ವತಿ ರಟಗೇರಿ, ಕಿಮ್ಸ್‌ನ ಚಿಕ್ಕಮಕ್ಕಳ ತಜ್ಞ ಡಾ. ವಿನೋದ ರಟಗೇರಿ, ಡಾ. ರಮೇಶ ರಟಗೇರಿ, ಎಸ್.ಪಿ. ಬಳಿಗಾರ, ಯಲ್ಲಪ್ಪ ತಳವಾರ, ರಾಮಣ್ಣ ಲಮಾಣಿ, ಹಾಲಪ್ಪ, ಶಶಿ ಲೂಹರ, ರಾಜು ತಳವಾರ, ಶಾಲೆಯ ಪ್ರಾಂಶುಪಾಲರು, ಎಲ್ಲಾ ಶಿಕ್ಷಕರು, ವಿದ್ಯಾರ್ಥಿಗಳು, ರಟಗೇರಿ ಕುಟುಂಬಸ್ಥರು, ಅನೇಕ ಗಣ್ಯರು, ಸಾರ್ವಜನಿಕರು ಪಾಲ್ಗೊಂಡಿದ್ದರು.

# ಫೆ. 27ರಂದು ನೇರ ಸಂದರ್ಶನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದಡಿಯಲ್ಲಿ ಅನುಮೋದನೆಯಾಗಿರುವ ಸಾರ್ವಜನಿಕ ಹಿತದೃಷ್ಟಿಯಿಂದ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸಲು ಮಾನೋವೈದ್ಯರ (Psychiatrist)-01 ಹುದ್ದೆಯನ್ನು ನೇಮಕಾತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ನೇರ ಸಂದರ್ಶನವನ್ನು (ವಾಕ್ ಇನ್ ಇಂಟರ್‌ವ್ಯೂವ್) ಫೆ. 27ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1 ಗಂಟೆವರೆಗೆ ಜಿಲ್ಲಾಡಳಿತ ಭವನದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಸಭಾಂಗಣ ಕೊಠಡಿ ಸಂಖ್ಯೆ-101 ಇಲ್ಲಿ ನಡೆಸಲಾಗುವುದು.

ಅದೇ ದಿನ ಅಭ್ಯರ್ಥಿ ಖುದ್ದಾಗಿ ಅರ್ಜಿಯನ್ನು ಭರ್ತಿ ಮಾಡಿ ಸ್ವಯಂ ದೃಢೀಕರಿಸಿದ ಝರಾಕ್ಸ್ ಪ್ರತಿ ಹಾಗೂ ಇತ್ತೀಚಿನ ಭಾವಚಿತ್ರದ ಎರಡು ಪ್ರತಿಗಳನ್ನು ಲಗತ್ತಿಸಿ ಸಲ್ಲಿಸಲು ಸೂಚಿಸಲಾಗಿದೆ.

ಯಾವುದೇ ಅಭ್ಯರ್ಥಿ ನೇರ ಸಂದರ್ಶನದಲ್ಲಿ ಹಾಜರಾಗದೆ ಇದ್ದಲ್ಲಿ ಪ್ರತಿ ಸೋಮವಾರ ರೋಲ್ ಔಟ್ ಮಾದರಿಯಲ್ಲಿ ನೇರ ಸಂದರ್ಶನ ಜರುಗಿಸಿ ನೇಮಕಾತಿ ಮಾಡಿಕೊಳ್ಳಲಾಗುವುದು.

ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ https://gadag.ac.in ನಲ್ಲಿ ವೀಕ್ಷಿಸಬಹುದು ಎಂದು ಜಿಲ್ಲಾ ಅಸಾಂಕ್ರಾಮಿಕ ರೋಗಗಳ /ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಟ್ಟಡ ಮಾಲಕರ ಗಮನಕ್ಕೆ

▶▶ ಮೊದಲನೇ ಪುಟದಿಂದ

ಬಯಸುವ ಕಟ್ಟಡ ಮಾಲಕರು ತಕ್ಷಣ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಎಸ್.ಪಿ ಕಚೇರಿ ಎದುರು, ಗದಗ ಇವರನ್ನು ಸಂಪರ್ಕಿಸಲು ಪ್ರಕಟಣೆಗೆ ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ-08372-297258, ಮೊಬೈಲ್ ಸಂಖ್ಯೆ-9480843128 ಸಂಪರ್ಕಿಸಬಹುದು.

## ಶ್ರೀ ವೀರಭದ್ರೇಶ್ವರ ದೇವಸ್ಥಾನದ ವಾರ್ಷಿಕೋತ್ಸವದ ಜನಜಾಗೃತಿ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಬೆಲೆಯುಳ್ಳ ಬದುಕಿಗೆ ಸಂಸ್ಕಾರ ಮುಖ್ಯ

■ವಿಜಯಸಾಕ್ಷಿ ಸುದ್ದಿ, ಕಡೂರು

ಧರ್ಮಾಚರಣೆ ಇಲ್ಲದ ಮನುಷ್ಯನ ವ್ಯಕ್ತಿತ್ವಕ್ಕೆ ಬೆಲೆ-ನೆಲೆ ಸಿಗಲಾರದು. ಬೆಲೆಯುಳ್ಳ ಅಮೂಲ್ಯ ಬದುಕಿಗೆ ಸಂಸ್ಕಾರ ಮುಖ್ಯವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ತಾಲೂಕಿನ ಗುಣಸಾಗರದ ಶ್ರೀ ವೀರಭದ್ರೇಶ್ವರ ದೇವಸ್ಥಾನದ 5ನೇ ವರ್ಷದ ವಾರ್ಷಿಕೋತ್ಸವ ಅಂಗವಾಗಿ ಜರುಗಿದ ಜನಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಆಹಾರ, ನೀರು, ಗಾಳಿ ದೈವಿಕ ವಿಕಾಸಕ್ಕೆ ಕಾರಣವಾದರೆ, ಆಧ್ಯಾತ್ಮ ಜ್ಞಾನ ಬದುಕನ್ನು ವಿಕಾಸಗೊಳಿಸುತ್ತದೆ. ವಿಚಾರ, ವಿಮರ್ಶೆಗಳು ಸಂಸ್ಕೃತಿಯ ಮೇಲೆ ಹೊಸ ಬೆಳಕು ಮೂಡಿಸಬೇಕೇ ಹೊರತು ಜನರನ್ನು ನಾಸ್ತಿಕರನ್ನಾಗಿ ಮಾಡಬಾರದು. ನಿನ್ನೆ ಸುಖ ಇತ್ತೆಂದು ಇತಿಹಾಸ ಹೇಳುತ್ತದೆ.



ವಿಜ್ಞಾನ ನಾಳೆ ಸುಖವಿದೆ ಎಂದು ಹೇಳುತ್ತದೆ. ಸತ್ಯ ಶುದ್ಧ ಮಾರ್ಗದಲ್ಲಿ ನಡೆದರೆ ಇಂದೇ ಸುಖ ಇದೆ ಎಂದು ಧರ್ಮ ಹೇಳುತ್ತದೆ. ಸಂಪತ್ತು ಬೆಳೆದಂತೆಲ್ಲ ಮಾನವೀಯ ಸಂಬಂಧಗಳು ಶಿಥಿಲಗೊಳ್ಳಬಾರದು. ಭೌತಿಕ ಜೀವನ ಸಮೃದ್ಧಿಯ ಜೊತೆಗೆ ಆಂತರಿಕ ಜೀವನ ಪರಿಶುದ್ಧಗೊಳ್ಳಬೇಕು. ಶ್ರೀ ಜಗದ್ಗುರು ರೇಣುಕಾಚಾರ್ಯರು ಜೀವನ ಮೌಲ್ಯಗಳನ್ನು ಸಿದ್ಧಾಂತ ಶಿಖಾಮಣಿಯಲ್ಲಿ ಬೋಧಿಸಿದ್ದಾರೆ. ದೇವಸ್ಥಾನಗಳು ನಮ್ಮ ಸಂಸ್ಕೃತಿಯ ಪ್ರತೀಕವಾಗಿದ್ದು, ಜನರಲ್ಲಿ ಜಾಗೃತಿ ಉಂಟುಮಾಡುವ ಪವಿತ್ರ ತಾಣಗಳಾಗಿವೆ. ಗುಣಸಾಗರದಲ್ಲಿ ಶ್ರೀ ವೀರಭದ್ರೇಶ್ವರ ಸುಂದರ ದೇವಸ್ಥಾನ ನಿರ್ಮಿಸಿ ಪ್ರತಿ ವರುಷ ವಾರ್ಷಿಕೋತ್ಸವ ಆಚರಿಸಿಕೊಂಡು ಬರುತ್ತಿರುವುದು ಹೆಮ್ಮೆಯ ಸಂಗತಿ ಎಂದರು.

ಬೀರೂರು ಶ್ರೀ ರಂಭಾಪುರಿ ಖಾಸಾ ಮಠದ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಉನ್ನತ ಗುರಿ ಮತ್ತು ಧ್ಯೇಯ ವ್ಯಕ್ತಿತ್ವ ವಿಕಾಸಕ್ಕೆ ದಾರಿದೀಪ. ಹಣತೆ ತನಗಾಗಿ ಉರಿಯುವುದಿಲ್ಲ. ಜಗಕ್ಕೆ ಬೆಳಕು ನೀಡಿ ತನ್ನ ಮೈ ತಾನು ಸುಟ್ಟುಕೊಳ್ಳುತ್ತದೆ. ಶ್ರೀ ಗುರು ಅರಿವು ನೀಡಿ ಜೀವನ ಸಾರ್ಥಕಪಡಿಸುತ್ತಾನೆ ಎಂದರು.

ಬಿಳಕಿ ಹಿರೇಮಠದ ರಾಚೋಟೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಬಿತ್ತಿದ ಬೀಜದಂತೆ ಫಸಲು ಪಡೆಯಲು ಹೇಗೆ ಸಾಧ್ಯವೋ ಹಾಗೆ ನಮ್ಮ ಧರ್ಮಾಚರಣೆಯಂತೆ ಫಲ ಪಡೆದುಕೊಳ್ಳಲು ಸಾಧ್ಯವಾಗುತ್ತದೆ. ಗುಣಸಾಗರದ ಭಕ್ತರು ಗುರುವಿನಲ್ಲಿ ಧರ್ಮದಲ್ಲಿ ಮತ್ತು ದೇವರಲ್ಲಿ ಅಪಾರ ಶ್ರದ್ಧೆ ಭಕ್ತಿ ಹೊಂದಿರುವುದು ಹೆಮ್ಮೆಯ ಸಂಗತಿ ಎಂದರು.

ಸಮಾರಂಭ ಉದ್ಘಾಟಿಸಿದ ಹುಲಿಕೆರೆ ದೊಡ್ಡಮಠದ ವಿರೂಪಾಕ್ಷಲಿಂಗ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಕಾಯಕ ಮಾಡಿ ಸಂಪಾದಿಸಿದ ಸಂಪತ್ತು ಶ್ರೇಷ್ಠ. ಅದು ಜೀವನಕ್ಕೆ ನೆಮ್ಮದಿ ಮತ್ತು ಆತ್ಮ ವಿಶ್ವಾಸವನ್ನು ಹೆಚ್ಚಿಸುತ್ತದೆ. ಗುಣಸಾಗರದ ಭಕ್ತರ ಮನಸ್ಸು ಪರಿಶುದ್ಧವಾದುದೆಂದು ಹರುಷ ವ್ಯಕ್ತಪಡಿಸಿದರು.

ಕೆ.ಬಿದರೆ ದೊಡ್ಡಮಠದ ಪ್ರಭುಕುಮಾರ ಶಿವಾಚಾರ್ಯ ಸ್ವಾಮಿಗಳು, ಹುಲಿಕೆರೆ ದೊಡ್ಡಮಠದ ನೂತನ ಮಲ್ಲಿಕಾರ್ಜುನ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಗಳು ಉಪಸ್ಥಿತರಿದ್ದರು. ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಜಿ.ಎನ್. ವಿಜಯಕುಮಾರ್ ಪ್ರಾಸ್ತಾವಿಕ ಮಾತನಾಡಿದರು. ದಾವಣಗೆರೆ ಸರ್ವಜ್ಞ ಸಂಶೋಧನಾ ಪೀಠದ ಅಧ್ಯಕ್ಷ ಡಾ. ಮಂಜಪ್ಪ ಶರಣರು, ಚಿಕ್ಕಮಗಳೂರು ಜಿಲ್ಲಾ ಘಟಕದ ಅ.ಭಾ.ವೀ.ಲಿಂ ಮಹಾಸಭಾದ ಅಧ್ಯಕ್ಷ ಹೆಚ್.ಎಂ. ಲೋಕೇಶ ಸಮಾರಂಭದಲ್ಲಿ ಪಾಲ್ಗೊಂಡಿದ್ದರು.

ಗೆದ್ಲೇಹಳ್ಳಿ ನಂಜಮ್ಮ-ವೀರಭದ್ರಪ್ಪ, ಗ್ರಾ.ಪಂ ಅಧ್ಯಕ್ಷೆ ಶೈಲಜಾ, ಸದಸ್ಯ ಜಿ.ಇ. ಶಶಿಧರ ಸೇರಿದಂತೆ ಗಣ್ಯರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ವಿಶೇಷ ಗುರುರಕ್ಷೆಯಿತ್ತು ಶುಭ ಹಾರೈಸಿದರು. ಶಿಕ್ಷಕ ಜಿ.ಎಸ್. ಉದಮಕುಮಾರ್ ನಿರೂಪಿಸಿದರು.

ಹುಲಿಕೆರೆ ಶಿವನಂಜಯ್ಯ ಶಾಸ್ತ್ರಿಗಳು, ದೇವನೂರು ಅಜಯ ಶಾಸ್ತ್ರಿಗಳು, ಗ್ರಾಮ ದೇವಾಲಯುದ ಅರ್ಚಕರಾದ ರುದ್ರಪ್ಪ ಶೆಟ್ರು ಮತ್ತು ಪ್ರಭುಸ್ವಾಮಿ ಪೂಜಾ ಕಾರ್ಯಗಳನ್ನು ನಿರ್ವಹಿಸಿದರು.

# ವಿದ್ಯಾರ್ಥಿಗಳಿಗೆ ಜ್ಞಾನದ ಬುತ್ತಿ ಗಟ್ಟಿಗೊಳಿಸುವ ಶಿಕ್ಷಕರ ಕಾರ್ಯ ಅತ್ಯಮೂಲ್ಯ: ಯಲ್ಲಪ್ಪ ಹಂದ್ರಾಳ



■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಶಿಕ್ಷಕರ ಪಾತ್ರ ಅಮೂಲ್ಯವಾಗಿದ್ದು, ಕಲಿಕಾ ವಾತಾವರಣವನ್ನು ಉತ್ತಮವಾಗಿ ನಿರ್ಮಿಸಿ ಮಕ್ಕಳಿಗೆ ಜ್ಞಾನದ ಬುತ್ತಿ ಗಟ್ಟಿಗೊಳಿಸುವ ಕಾರ್ಯ ನಿಜಕ್ಕೂ ಶ್ಲಾಘನೀಯ ಎಂದು ಡಯಟ್ ಉಪನ್ಯಾಸಕ ಯಲ್ಲಪ್ಪ ಹಂದ್ರಾಳ ಹೇಳಿದರು.

ಅವರು ಡಂಬಳ ಹೋಬಳಿಯ ಕದಾಂಪುರ ಗ್ರಾಮದ ಶ್ರೀ ಬಸಪ್ಪ ಮಲ್ಲಪ್ಪ ಹೊಸೂರ ಸರಕಾರಿ ಪ್ರೌಢಶಾಲೆಯ ವಾರ್ಷಿಕೋತ್ಸವ ಹಾಗೂ ಮಿಷನ್ 40 ಪ್ಲಸ್ ಕಲಿಕಾ ಚಟುವಟಿಕೆಗಳ ಬ್ಯಾನರ್ ಉದ್ಘಾಟಿಸಿ ದೀಪ ಬೆಳಗಿಸಿ ಮಾತನಾಡಿದರು.

ಮುಖ್ಯೋಪಾಧ್ಯಾಯ ಎ.ಎಲ್. ಬಿಜಾಪುರ ಪ್ರಾಸ್ತಾವಿಕವಾಗಿ ಮಾತನಾಡಿ, ಶ್ರೀ ಬಸಪ್ಪ ಹೊಸೂರ ಅವರು ಭೂದಾನ ನೀಡಿದ ಫಲವಾಗಿ ಇಂದು ನೂರಾರು ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ ಸಿಗುತ್ತಿದೆ. ಸರ್ಕಾರದ 29 ಅಂಶಗಳ ಕಾರ್ಯಕ್ರಮಗಳನ್ನು ಚಾಚುತಪ್ಪದೆ ಅನುಷ್ಠಾನಗೊಳಿಸಲಾಗಿದೆ. ಮುಂಜಾನೆ ವಿಶೇಷ ತರಗತಿಗಳು, ಓದಿನ ಮನೆ, ಭಾನುವಾರ ವಿಶೇಷ ಕ್ಲಾಸ್‌ಗಳ ಮೂಲಕ ಶಿಕ್ಷಣಕ್ಕೆ ಆದ್ಯತೆ ನೀಡಲಾಗಿದೆ. ಇಕೋ ಕ್ಲಬ್ ಸ್ಥಾಪಿಸಲಾಗಿದೆ. ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗಾಗಿ ಶಿಕ್ಷಕರ ಆರ್ಥಿಕ ಸಹಕಾರದೊಂದಿಗೆ 40 ಪ್ಲಸ್ ಕಲಿಕಾ ಚಟುವಟಿಕೆಗಳ ಬೋರ್ಡ್ ಅನ್ನು ಜಿಲ್ಲೆಯಲ್ಲಿ ಪ್ರಥಮವಾಗಿ ಅಳವಡಿಸಲಾಗಿದೆ. ಈ ವರ್ಷ ನೂರಕ್ಕೆ ನೂರು ಫಲಿತಾಂಶ ಸಾಧಿಸುವ ವಿಶ್ವಾಸವಿದೆ ಎಂದರು.

ಸಮಾಜಸೇವಕ ಮಲ್ಲನಗೌಡ ಪಾಟೀಲ ಮಾತನಾಡಿ, ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ ನೀಡುವುದು ಶಿಕ್ಷಕರ ಹೊಣೆಗಾರಿಕೆಯಾದರೂ, ಪಾಲಕರ ಜವಾಬ್ದಾರಿಯೂ ಅಷ್ಟೇ ಮಹತ್ವದ್ದಾಗಿದೆ. ಎಲ್ಲರೂ ಮಕ್ಕಳ ವಿದ್ಯಾಭ್ಯಾಸಕ್ಕೆ ಹೆಚ್ಚಿನ ಆದ್ಯತೆ ನೀಡಿದರೆ ಅವರ ಭವಿಷ್ಯ ಉಜ್ವಲವಾಗುತ್ತದೆ ಎಂದು ತಿಳಿಸಿದರು.

ವರದಿ ವಾಚನವನ್ನು ಶಿಕ್ಷಕಿ ಸಂಗೀತಾ ಪಾಟೀಲ ಮಂಡಿಸಿದರು. ವಿದ್ಯಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಅದ್ದೂರಿಯಾಗಿ ಜರುಗಿದವು.

ಕಾರ್ಯಕ್ರಮದಲ್ಲಿ ಸಿಆರ್‌ಪಿ ಎಸ್.ಎಂ. ಪಾಟೀಲ, ಎಸ್‌ಡಿಎಂಸಿ ಅಧ್ಯಕ್ಷ ಬಸಪ್ಪ ನರೇಗಲ್, ಉಪಾಧ್ಯಕ್ಷೆ ನಂದಾ ಕವಲೂರ, ಮುತ್ತಣ್ಣ ಹೊಸೂರ, ಪ್ರಕಾಶ ಸಂಕಣ್ಣವರ, ಮಲ್ಲನಗೌಡ ಪಾಟೀಲ, ಪಕ್ಕಪ್ಪ ಬಾದಾಮಿ, ರುದ್ರಪ್ಪ, ಬಸವಂತಪ್ಪ ಬಡಿಗೇರ, ವಿರೇಶ ಚೆನ್ನವೀರಮಠ, ಪ್ರಭು ಕಾರಪುಡಿ, ಅಡವೆಪ್ಪ ಪೂಜಾರ, ಪುಷ್ಪಾ, ಹುಸೇನಸಾಬ ನಧಾಫ, ಹನಮವ್ವ, ಯಲ್ಲವ್ವ, ಹನಮವ್ವ ಹುಲ್ಲಣ್ಣವರ, ಗಂಗಾಧರ ಚೆನ್ನವೀರಮಠ, ರುದ್ರಪ್ಪ ಅಡರಕಟ್ಟಿ, ವೀರನಗೌಡ ಪಾಟೀಲ, ಶಿವು ಸಂಕಣ್ಣವರ, ರಾಮನಗೌಡ್ರ ಹಿರೇಗೌಡರ, ಪ್ರವೀಣ ಹರಿಜನ, ಕುಮಾರಸ್ವಾಮಿ ಹಿರೇಮಠ ಸೇರಿದಂತೆ ಎಸ್‌ಡಿಎಂಸಿ ಸದಸ್ಯರು, ಗುರುವೃಂದ, ಗ್ರಾಮದ ಹಿರಿಯರು, ಯುವಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಸ್ವಾಗತವನ್ನು ವಾಯ್.ಎನ್. ಓಸೇಕರ ನೆರವೇರಿಸಿದರು. ನಿರೂಪಣೆಯನ್ನು ಬಿ.ಡಿ. ಅರ್ಜನಾಳ ನಡೆಸಿದರು. ವಂದನಾರ್ಪಣೆಯನ್ನು ಪಿ.ಎನ್. ಉಕ್ಕುಂದ ಸಲ್ಲಿಸಿದರು.

# ತಂಬ್ರಹಳ್ಳಿಯಲ್ಲಿ ವಿದ್ಯುತ್ ಸಮಸ್ಯೆ: 20 MVA ಟ್ರಾನ್ಸ್‌ಫಾರ್ಮರ್ ಅಳವಡಿಕೆಗೆ ಭರವಸೆ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಂಬ್ರಹಳ್ಳಿ ಭಾಗದಲ್ಲಿ ಉಂಟಾಗಿರುವ ವಿದ್ಯುತ್ ಸಮಸ್ಯೆ ಪರಿಹಾರಕ್ಕೆ ಅಧಿಕಾರಿಗಳು ಸ್ಪಷ್ಟ ಭರವಸೆ ನೀಡಿದ್ದು, ವಾರದೊಳಗೆ 20 ಒಗಿಂ ಸಾಮರ್ಥ್ಯದ ಹೊಸ ಪರಿವರ್ತಕ (ಟ್ರಾನ್ಸ್‌ಫಾರ್ಮರ್) ಅಳವಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದ್ದಾರೆ.

ತಂಬ್ರಹಳ್ಳಿಯ ಕೊಟ್ರೇಶ್ವರ ದೇವಸ್ಥಾನದಲ್ಲಿ ನಡೆದ ಕೆಪಿಟಿಸಿಎಲ್ ಸಬ್ ಸ್ಟೇಷನ್ ವ್ಯಾಪ್ತಿಯ ರೈತರ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಯಿತು. ಸಭೆಯಲ್ಲಿ ಮಾತನಾಡಿದ ಜೆಸ್ಕಾಂ ಬಳ್ಳಾರಿ ವಲಯದ ಹಿರಿಯ ಇಂಜಿನಿಯರ್ ತೇಜನಾಯ್ಕ ಹಾಗೂ ಕೆಪಿಟಿಸಿಎಲ್ ಇಟ್ಟಿಗಿ ಇ.ಇ. ರವೀಂದ್ರನಾಥ್, ಸೋಮವಾರದಿಂದಲೇ ಕಾಮಗಾರಿ ಆರಂಭವಾಗಲಿದೆ ಎಂದು ತಿಳಿಸಿದರು.

ಹೊಸ 20 ಒಗಿಂ ಪರಿವರ್ತಕ ಅಳವಡಿಸುವ ಕಾರ್ಯ ನಡೆಯುವ ಅವಧಿಯಲ್ಲಿ ಎಂಟು ದಿನಗಳ ಕಾಲ ಪ್ರತಿದಿನ ಐದು ಗಂಟೆಗಳ ವಿದ್ಯುತ್ ಸರಬರಾಜು ನೀಡಲು ತೀರ್ಮಾನಿಸಲಾಗಿದೆ. ರೈತರ ಕೃಷಿ ಚಟುವಟಿಕೆಗಳಿಗೆ ಅಡಚಣೆ ಆಗದಂತೆ ತಾತ್ಕಾಲಿಕ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದರು.

ರೈತರ ಪ್ರಮುಖ ಬೇಡಿಕೆಗಳಾದ ಇಟ್ಟಿಗಿಯಿಂದ ತಂಬ್ರಹಳ್ಳಿ ಕೆಪಿಟಿಸಿಎಲ್ ಸಬ್ ಸ್ಟೇಷನ್ ವರೆಗೆ 18 ಕಿ.ಮೀ ಹೊಸ ಲೈನ್ ನಿರ್ಮಾಣ, ಇಬ್ಬರು ಲೈನ್ ಮನ್ ಗಳ ನಿಯೋಜನೆ ಹಾಗೂ ತಂಬ್ರಹಳ್ಳಿಯಲ್ಲಿ ವಿಭಾಗೀಯ ಕಚೇರಿ ತೆರೆಯುವ ಕುರಿತು ಶೀಘ್ರ ಕ್ರಮ ಕೈಗೊಳ್ಳುವುದಾಗಿ ಅಧಿಕಾರಿಗಳು ಭರವಸೆ ನೀಡಿದರು.

ಸಭೆಯಲ್ಲಿ ಜೆಸ್ಕಾಂ ಇ.ಇ. ಸತೀಶ್, ಎ.ಇ. ನಾಗರಾಜ್, ಸೆಕ್ಷನ್ ಅಧಿಕಾರಿಗಳಾದ ಶ್ರೀನಿವಾಸ, ಜಗದೀಶ್ ಸೇರಿದಂತೆ ಅನೇಕ ರೈತರು ಹಾಗೂ ಮುಖಂಡರು ಉಪಸ್ಥಿತರಿದ್ದರು. ರೈತರು ಸಮಸ್ಯೆಗಳ ಪರಿಹಾರಕ್ಕಾಗಿ ತಕ್ಷಣದ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು.

ವಿದ್ಯುತ್ ಸಮಸ್ಯೆ ನಿವಾರಣೆಯ ಭರವಸೆಯಿಂದ ತಂಬ್ರಹಳ್ಳಿ ಭಾಗದ ರೈತರು ಆಶಾವಾದ ವ್ಯಕ್ತಪಡಿಸಿದ್ದಾರೆ.

# ಕೋಮು ಸೌಹಾರ್ದತೆಯ ಹರಿಕಾರರು ಲಿಂ. ತೋಂಟದ ಸಿದ್ದಲಿಂಗ ಶ್ರೀ

■ವಿಜಯಸಾಕ್ಷಿ ಸುದ್ದಿ, ಡಂಬಳ

ಲಿಂ. ಡಾ. ತೋಂಟದ ಸಿದ್ಧಲಿಂಗ ಶ್ರೀ ನಾಡು ಕಂಡ ಕನ್ನಡದ ಕುಲಗುರು, ಕೋಮು ಸೌಹಾರ್ದತೆಯ ಹರಿಕಾರರು, ಜನಸಾಮಾನ್ಯರ ಸ್ವಾಮೀಜಿ, ಪುಸ್ತಕ ಸ್ವಾಮೀಜಿ, ತ್ರಿವಿಧ ದಾಸೋಹಿಗಳು ಹಾಗೂ ಪರಿಸರ ಪ್ರೇಮಿಗಳಾಗಿದ್ದರು ಎಂದು ರಾಷ್ಟ್ರೀಯ ಉತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತ ನಿಂಗು ಸೊಲಗಿ ಹೇಳಿದರು.

ಡಂಬಳ ಗ್ರಾಮದ ಶ್ರೀ ಜಗದ್ಗುರು ತೋಂಟದಾರ್ಯ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಮಂಗಳವಾರ ಜಗದ್ಗುರು ಲಿಂ. ಡಾ. ತೋಂಟದ ಸಿದ್ದಲಿಂಗ ಮಹಾಸ್ವಾಮಿಗಳವರ 77ನೇ ಜಯಂತಿ ಹಾಗೂ ರಾಷ್ಟ್ರೀಯ ಭಾವೈಕ್ಯತಾ ದಿನಾಚರಣೆಯ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ ಅವರು ಮಾತನಾಡಿದರು.

ಶ್ರೀಗಳು ಮೌಢ್ಯ ಹಾಗೂ ಕಂದಾಚಾರಗಳ ವಿರುದ್ಧ ಹೋರಾಟ ನಡೆಸಿ, ತಾವೇ ಪಲ್ಲಕ್ಕಿಯಲ್ಲಿ ಕುಳಿತುಕೊಳ್ಳುವುದನ್ನು ತ್ಯಜಿಸಿದರು. ಪಲ್ಲಕ್ಕಿಯಲ್ಲಿ ವಚನ ಗ್ರಂಥಗಳನ್ನು ಇರಿಸಿ ಅದರ ಮುಂದೆ ಪಾದಚಾರಿಗಳಾಗಿ ಸಾಗುವ ಮೂಲಕ ವೈಚಾರಿಕತೆಯ ಹೊಸ ದಿಕ್ಕು ತೋರಿದರು. ಜಾತ್ರೆಗಳು ಜನಮನಗಳನ್ನು ಒಂದಾಗಿಸುವ ಕಾರ್ಯ ಮಾಡಬೇಕು ಎಂಬ ಆಶಯದಿಂದ ರೊಟ್ಟಿ ಜಾತ್ರೆಗೆ ಚಾಲನೆ ನೀಡಿದರು. ಕೃಷಿ ಕ್ಷೇತ್ರದಲ್ಲಿ ಅಮೂಲಾಗ್ರ ಬದಲಾವಣೆ ತಂದು ಮಾದರಿ ಕೃಷಿಗೆ ಪ್ರೇರಣೆ ನೀಡಿದರು ಎಂದರು.

ಕನ್ನಡ ಕವಿಗಳು ಹಾಗೂ ಲೇಖಕರ ಕೃತಿಗಳನ್ನು ಪ್ರತಿ ವರ್ಷ ಶ್ರೀಮಠದ ಕಾರ್ಯಕ್ರಮಗಳಲ್ಲಿ ಪ್ರಕಟಿಸುವ ಮೂಲಕ ಒಂದು ವಿಶ್ವವಿದ್ಯಾಲಯದ ಕೆಲಸವನ್ನು ಪೂಜ್ಯರು ಮಾಡಿದ್ದಾರೆ. ನೆಲ, ಜಲ, ಭಾಷೆ ಮತ್ತು ನಾಡು-ನುಡಿಗಾಗಿ ಅವರು ನಡೆಸಿದ ಹೋರಾಟ ಸದಾಕಾಲ ಸ್ಮರಣೀಯ ಎಂದು ಹೇಳಿದರು. ಡಂಬಳ ಮಠದ ಆಡಳಿತಾಧಿಕಾರಿ ಜಿ.ವಿ. ಹಿರೇಮಠ ಮಾತನಾಡಿ, 1983ರಲ್ಲಿ ಗ್ರಾಮೀಣ ಭಾಗದಲ್ಲಿ ಐಟಿಐ ಸಂಸ್ಥೆಗಳನ್ನು ಸ್ಥಾಪಿಸಿ ಬಡ ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶ ಸೃಷ್ಟಿಸಿದರು. ಗ್ರಾಮೀಣ ಪ್ರದೇಶದ ಹಿಂದುಳಿದ ಯುವಕರ ಸ್ವಾವಲಂಬನೆ ಬದುಕಿಗೆ ಮುನ್ನುಡಿ ಬರೆದರು. ಶ್ರೀಮಠದಿಂದ ದೀನ ದಲಿತರ ಹಾಗೂ ನಿರ್ಗತಿಕರ ಬದುಕು ಕಟ್ಟಿಕೊಳ್ಳಲು ಆಕಳನ್ನು ದಾನವಾಗಿ ನೀಡುತ್ತಿದ್ದರು ಎಂದು ತಿಳಿಸಿದರು.

ಪ್ರಾಚಾರ್ಯ ಎಸ್.ಎಂ. ಶಿವರಾಚಯ್ಯ, ವಿದ್ಯಾರ್ಥಿಗಳು ಪೂಜ್ಯರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಉತ್ತಮ ಪ್ರಜೆಗಳಾಗಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ವಿರುಪಾಕ್ಷಪ್ಪ ಲಕ್ಕುಂಡಿ, ಮಹೇಶಗೌಡ ಗೌಡರ, ಸಂಸ್ಥೆಯ ತರಬೇತಿ ಅಧಿಕಾರಿಗಳು, ಸಿಬ್ಬಂದಿ ವರ್ಗ, ತರಬೇತಿದಾರರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು. ರಮೇಶ್ ಕೊರ್ಲಹಳ್ಳಿ ಕಾರ್ಯಕ್ರಮ ನಿರೂಪಿಸಿದರು. ಸುರೇಶ್ ಕುಂಬಾರ ವಂದನಾರ್ಪಣೆ ಸಲ್ಲಿಸಿದರು.



## ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು

# ವಿದ್ಯಾರ್ಥಿಗಳ ನಿರಂತರ ಪರಿಶ್ರಮವೇ ಯಶಸ್ಸಿನ ಕೀಲಿಕೈ



■ವಿಜಯಸಾಕ್ಷಿ ಸುದ್ದಿ, ಗದಗ

ವಾರ್ಷಿಕ ಪರೀಕ್ಷೆ ಸಮೀಪಿಸುತ್ತಲಿದೆ. ವಿದ್ಯಾರ್ಥಿಗಳು ಏಕಾಗ್ರತೆಯಿಂದ ಓದಬೇಕು. ಓದಿದ್ದನ್ನು ಮನನ ಮಾಡಬೇಕು. ಪ್ರತಿದಿನ ಆರು ಗಂಟೆಯಾದರೂ ಓದಬೇಕು. ಹೀಗೆ ವಿದ್ಯಾರ್ಥಿಗಳು ನಿರಂತರ ಪರಿಶ್ರಮಪಟ್ಟರೆ ಖಂಡಿತ ಯಶಸ್ಸು ನಿಮ್ಮದಾಗುತ್ತದೆ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಆಶೀರ್ವಚನ ನೀಡಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2785ನೇ ಶಿವಾನುಭವದ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ವಿದ್ಯಾರ್ಥಿಗಳ ಜೀವನದಲ್ಲಿ 10ನೇ ತರಗತಿ ತುಂಬಾ ಮಹತ್ವದ ಹಂತ. ಶಿಕ್ಷಕರು ಹೇಳಿದ್ದನ್ನು ನೆನಪಿನಲ್ಲಿ ಇಟ್ಟುಕೊಂಡು, ಶ್ರಮವಹಿಸಿ ಅಭ್ಯಾಸಮಾಡಿ, ಏಕಾಗ್ರತೆಯಿಂದ ಪರೀಕ್ಷೆ ಎದುರಿಸಬೇಕು. ವಿದ್ಯಾರ್ಥಿಗಳ ಫಲಿತಾಂಶ ಚೆನ್ನಾಗಿ ಬರಬೇಕೆಂದು ಶಿಕ್ಷಕರು, ಇಲಾಖೆಯ ಅಧಿಕಾರಿಗಳು ಈ ವರ್ಷ ಬಹಳಷ್ಟು ಕಾರ್ಯಕ್ರಮ ರೂಪಿಸಿಕೊಂಡಿದ್ದಾರೆ. ಕಳೆದ ಸಾಲಿನಲ್ಲಿ ಎರಡಂಕಿಯ ಫಲಿತಾಂಶ ಬಂದಿದೆ. ಈ ವರ್ಷ ರಾಜ್ಯಮಟ್ಟದಲ್ಲಿ ಒಂದಂಕಿಯಲ್ಲಿ ಫಲಿತಾಂಶ ಬರಬೇಕು. ಅದು ಮೂರರೊಳಗೆ ಬರಬೇಕು. ಒಂದನೇ ಸ್ಥಾನ ಬರಲು ಪ್ರಯತ್ನವಿರಲಿ. ಎಲ್ಲಾ ವಿದ್ಯಾರ್ಥಿಗಳಿಗೆ ಒಳ್ಳೆಯದಾಗಲಿ ಎಂದು ಶ್ರೀಗಳು ಶುಭ ಹಾರೈಸಿದರು.

ನಿವೃತ್ತ ಉಪನಿರ್ದೇಶಕರು ಹಾಗೂ ಶಿವಾನುಭವ ಸಮಿತಿಯ ಚೇರಮನ್ ಐ.ಬಿ. ಬೆನಕೊಪ್ಪ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿಷಯ ಸಂಪನ್ಮೂಲ ವ್ಯಕ್ತಿಗಳಾಗಿ ಎಚ್.ಬಿ. ರಡ್ಡೇರ, ಸೆಲ್ವಾ, ಚಂದ್ರಶೇಖರ ಜೋಗಿನ, ಮುತ್ತು ಗಾರವಾಡ, ನಾಗನಗೌಡ ಮೇಟಿ, ಎಂ.ಎಂ. ಯರಗುಡಿ, ನೂರ್‌ಅಹಮ್ಮದ್ ನದಾಫ್ ಅವರು ಎಸ್‌ಎಸ್‌ಎಲ್‌ಸಿ ಮಕ್ಕಳ ಸಂವಾದ ಕಾರ್ಯಕ್ರಮದಲ್ಲಿ ಕೇಳಿದ ಅನೇಕ ಪ್ರಶ್ನೆಗಳಿಗೆ ಸಮರ್ಪಕ ಉತ್ತರ ನೀಡಿದರು. ಮುಖ್ಯ ಅತಿಥಿಗಳಾಗಿ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡವಿನಮನಿ ಹಾಗೂ ಆರ್.ವಿ. ಶೆಟ್ಟೆಪ್ಪನವರ ಉಪಸ್ಥಿತರಿದ್ದರು. ನಗರ ವಲಯದ ವಿವಿಧ ಶಾಲೆಗಳಿಂದ ಬಂದ 500ಕ್ಕೂ ಹೆಚ್ಚಿಗೆ ಮಕ್ಕಳು ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಶಿಕ್ಷಕರು ಪಾಲಕರು ಉಪಸ್ಥಿತರಿದ್ದರು.

ಉಪನ್ಯಾಸಕರಾಗಿ ಆಗಮಿಸಿದ ಗದಗ ಜಿಲ್ಲೆಯ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಆರ್.ಎಸ್. ಬುರಡಿ ಮಾತನಾಡಿ, ಮಕ್ಕಳಿಗೆ ಈಗಾಗಲೇ ಹೇಗೆ ಅಭ್ಯಾಸ ಮಾಡಬೇಕು ಎಂಬುದನ್ನು ಶಿಕ್ಷಕರು ಹೇಳಿದ್ದಾರೆ. ಪರೀಕ್ಷೆಯಂದು ಯಾರೂ ಭಯಪಡಬಾರದು. ಚೆನ್ನಾಗಿ ಓದಿ ಮನನ ಮಾಡಿಕೊಳ್ಳಿ. ಕಠಿಣ ವಿಷಯಗಳನ್ನು ಪದೇ ಪದೇ ಓದಿಕೊಳ್ಳಿ. ಇಷ್ಟಪಟ್ಟು ಪ್ರತಿದಿನ ಆರು ತಾಸು ಓದಿ. ಉತ್ತಮ ಫಲಿತಾಂಶ ಬಂದೇ ಬರುತ್ತದೆ. ನಿರಂತರ ಓದು ನಿಮ್ಮದಾಗಲಿ ಎಂದು 10ನೇ ತರಗತಿ ವಿದ್ಯಾರ್ಥಿಗಳಿಗೆ ತಿಳಿಸಿದರು.

ಸ್ವರಾಲಯ ಸ್ಕೂಲ್ ಆಫ್ ಮ್ಯೂಸಿಕ್ ಗದಗ ವಿದ್ಯಾರ್ಥಿಗಳಿಂದ ಸಂಗೀತ ಕಾರ್ಯಕ್ರಮ ನೆರವೇರಿತು. ವಚನ ಸಂಗೀತ ಸೇವೆಯನ್ನು ಮೃತ್ಯುಂಜಯ ಹಿರೇಮಠ, ಗುರುನಾಥ್ ಸುತಾರ ನಡೆಸಿಕೊಟ್ಟರು. ಧರ್ಮಗ್ರಂಥ ಪಠಣವನ್ನು ವರ್ಣಿಕಾ ಚಿಕ್ಕಮಠ, ವಚನ ಚಿಂತನವನ್ನು ಶ್ರೀರಕ್ಷಾ ಹೊನಗಣ್ಣವರ ನೆರವೇರಿಸಿದರು. ದಾಸೋಹ ಸೇವೆಯನ್ನು ರತ್ನಕ್ಕ ಬಸನಗೌಡ ಪಾಟೀಲ್ ವಹಿಸಿಕೊಂಡಿದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಡಾ. ಉಮೇಶ ಪುರದ, ವಿದ್ಯಾ ಪ್ರಭು ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ ಸಹಕಾರ್ಯದರ್ಶಿ ಸೋಮನಾಥ ಪುರಾಣಿಕ, ನಾಗರಾಜ್ ಹಿರೇಮಠ ಸಂಘಟನಾಕಾರ್ಯದರ್ಶಿ ಮಹೇಶ್ ಗಾಣಿಗೇರ ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ ಹಾಗೂ ಶಿವಾನುಭವ ಸಮಿತಿಯ ಸಹ ಚೇರಮನ್ ಶಿವಾನಂದ ಹೊಂಬಳ ಹಾಗೂ ಶ್ರೀಮಠದ ಸದ್ಭಕ್ತರು ಉಪಸ್ಥಿತರಿದ್ದರು.

ಶಿವಾನುಭವ ಸಮಿತಿಯ ಚೇರಮನ್ ಐ.ಬಿ. ಬೆನಕೊಪ್ಪ ಸ್ವಾಗತಿಸಿದರು. ವಿದ್ಯಾ ಪ್ರಭು ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು.

# ಮೊಬೈಲ್ ಕ್ಯಾಂಟೀನ್ ಉದ್ಯಮಕ್ಕೆ ಕೌಶಲ್ಯಾಭಿವೃದ್ಧಿ ತರಬೇತಿ: ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆ ಅಡಿಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಸಣ್ಣ ಉದ್ಯಮಿದಾರರನ್ನು ಉತ್ತೇಜಿಸುವ ಉದ್ದೇಶದಿಂದ Entrepreneurship (ಮೊಬೈಲ್ ಕ್ಯಾಂಟೀನ್) ವಿಷಯದ ಮೇಲೆ ಒಂದು ತಿಂಗಳ ಕೌಶಲ್ಯಾಭಿವೃದ್ಧಿ ತರಬೇತಿಯನ್ನು ಆಯೋಜಿಸಲಾಗುತ್ತಿದೆ.

ತರಬೇತಿ ಯಶಸ್ವಿಯಾಗಿ ಪೂರ್ಣಗೊಳಿಸಿದ ಅಭ್ಯರ್ಥಿಗಳಿಗೆ ಮೊಬೈಲ್ ಕ್ಯಾಂಟೀನ್ ನಡೆಸಲು ಸಹಾಯಧನ ನೀಡುವ ವ್ಯವಸ್ಥೆಯೂ ಇದೆ ಎಂದು ತಿಳಿಸಲಾಗಿದೆ.

**ಅರ್ಹತೆಗಳು: ಕನಿಷ್ಠ ವಿದ್ಯಾರ್ಹತೆ:** 10ನೇ ತರಗತಿ ಉತ್ತೀರ್ಣ ವಯಸ್ಸು: 20ರಿಂದ 55 ವರ್ಷಗಳೊಳಗೆ, ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿರಬೇಕು.

ಆಸಕ್ತ ಅಭ್ಯರ್ಥಿಗಳು ತಮ್ಮ ಅರ್ಜಿಗಳನ್ನು ಮಾರ್ಚ್ 13ರೊಳಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಪ್ರವಾಸೋದ್ಯಮ ಇಲಾಖೆ, ಎ.ಸಿ. ಕಚೇರಿ ಕಟ್ಟಡ, ಗದಗ ಜಿಲ್ಲೆ - 582103 ಇಲ್ಲಿ ಕಚೇರಿ ವೇಳೆಯಲ್ಲಿ ಖುದ್ದಾಗಿ ಸಂಪರ್ಕಿಸಬಹುದು. ದೂರವಾಣಿ ಸಂಖ್ಯೆ: 08372-233017 ಮೂಲಕವೂ ಮಾಹಿತಿ ಪಡೆಯಬಹುದಾಗಿದೆ ಎಂದು ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ನರಸಾಪುರದ ಅನ್ನದಾನೇಶ್ವರ ಪ್ರೌಢಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನದಲ್ಲಿ ಡಾ. ಅನ್ನದಾನೇಶ್ವರ ಶ್ರೀಗಳು**

# ಗ್ರಾಮೀಣ ವಿದ್ಯಾರ್ಥಿಗಳ ಬದುಕಿಗೆ ದಾರಿದೀಪ

■ವಿಜಯಸಾಕ್ಷಿ ಸುದ್ದಿ, ಗದಗ

ಕಳೆದ 42 ವರ್ಷಗಳಿಂದ ಗ್ರಾಮೀಣ ವಿದ್ಯಾರ್ಥಿಗಳನ್ನೇ ಕೇಂದ್ರೀಕೃತವಾಗಿಟ್ಟುಕೊಂಡು ಅವರ ಬಾಳಿಗೆ ಬೆಳಕಿನ ದಾರಿ ತೋರಿ ಅಕ್ಷರದ ಅರಿವು ಮೂಡಿಸಿದ ಈ ಭಾಗದ ವಿದ್ಯಾರ್ಥಿಗಳ ಹೆಮ್ಮೆಯ ಶಾಲೆ ನರಸಾಪುರದ ಅನ್ನದಾನೇಶ್ವರ ಪ್ರೌಢಶಾಲೆ ಎಂದು ಹೇಳಲು ಸಂತೋಷ ಎನಿಸುತ್ತದೆ ಎಂದು ಮುಂಡರಗಿಯ ಅನ್ನದಾನೇಶ್ವರ ವಿದ್ಯಾ ಸಮಿತಿಯ ಅಧ್ಯಕ್ಷರಾದ ಜಗದ್ಗುರು ನಾಡೋಜ ಡಾ. ಅನ್ನದಾನೇಶ್ವರ ಮಹಾಸ್ವಾಮಿಗಳು ಮೆಚ್ಚುಗೆ ವ್ಯಕ್ತಪಡಿಸಿದರು.

ಅವರು ಪ್ರಸಕ್ತ ಸಾಲಿನ ವಾರ್ಷಿಕ ಸ್ನೇಹ ಸಮ್ಮೇಳನ, ಪ್ರತಿಭಾ ಪುರಸ್ಕಾರ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿ ಮಾತನಾಡಿದರು.

ಶ್ರೀಮಠ ವಿಶೇಷವಾಗಿ ಗ್ರಾಮೀಣ ವಿದ್ಯಾರ್ಥಿಗಳ ಹಾಗೂ ಹೆಣ್ಣು ಮಕ್ಕಳಿಗೆ ಶಿಕ್ಷಣ ಕೊಡುವಲ್ಲಿ ವಿಶೇಷ ಆದ್ಯತೆ ನೀಡುತ್ತಾ ಬಂದಿದೆ. ನಮ್ಮ



ಎಲ್ಲ ಶಾಲಾ-ಕಾಲೇಜುಗಳು ಹೆಚ್ಚಾಗಿ ಗ್ರಾಮೀಣ ಪ್ರದೇಶದಲ್ಲಿ ಇವೆ. ಕಳೆದ ಶತಮಾನಗಳಿಂದ ಶಿಕ್ಷಣ ಪ್ರಸಾರದಲ್ಲಿ ನಮ್ಮ ಸಂಸ್ಥೆ ಯಾವುದೇ ಫಲಾಪೇಕ್ಷೆಯನ್ನು ಇಲ್ಲಿಯವರೆಗೆ ಅಪೇಕ್ಷಿಸಿಲ್ಲ. ಅದನ್ನೊಂದು ಸಮಾಜ ಸೇವಾ ಕ್ಷೇತ್ರವೆಂದು ಭಾವಿಸಿದ್ದೇವೆ. ಅನ್ನದಾಸೋಹ, ಅಕ್ಷರ ದಾಸೋಹ, ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಅರಿವು ಮೂಡಿಸುವ ಕಾಯಕದಲ್ಲಿ ನಮಗೆ ಹೆಚ್ಚಿನ ಖುಷಿ ತಂದಿದೆ ಎಂದು ಹೇಳಿದರು.

ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಆರ್.ಎಸ್. ಬುರುಡಿ, ಸಮಿತಿಯ ಆಡಳಿತ ಅಧಿಕಾರಿಗಳಾದ ಡಾ. ಬಿ.ಜಿ. ಜವಳಿ, ಅಕ್ಷರ ದಾಸೋಹದ ಸಹಾಯಕ ನಿರ್ದೇಶಕರಾದ ಶಂಕರ್ ಹಡಗಲಿ ಮಾತನಾಡಿ, ಶತಮಾನೋತ್ಸವ ಆಚರಿಸಿಕೊಂಡ ಅನ್ನದಾನೇಶ್ವರ ವಿದ್ಯಾ ಸಮಿತಿಯ ಹೆಜ್ಜೆ ಗುರುತುಗಳನ್ನು ಮೆಲುಕು ಹಾಕಿದರು.

ಇದೇ ಸಂದರ್ಭದಲ್ಲಿ ಸಾಧಕ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗೌರವಿಸಿ ಅಭಿನಂದಿಸಲಾಯಿತು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಅವ್ವ ಸೇವಾ ಟ್ರಸ್ಟಿನ ಗದಗ ಸಂಚಾಲಕ ಡಾ. ಬಸವರಾಜ್ ಧಾರವಾಡ ಮಾತನಾಡಿ, ಮುಂಡರಗಿ ಅನ್ನದಾನೇಶ್ವರ ವಿದ್ಯಾ ಸಮಿತಿ ಈಗಾಗಲೇ ಶತಮಾನೋತ್ಸವ ಆಚರಿಸಿಕೊಂಡು ನೂರು ವರ್ಷಗಳ ಕಾಲ ತನ್ನ ಅವಿರತ ಶೈಕ್ಷಣಿಕ, ಸಾಮಾಜಿಕ, ಧಾರ್ಮಿಕ ಸೇವೆಯನ್ನು ನಾಡಿಗೆ ನೀಡುತ್ತಾ ಬಂದಿರುವ ಉತ್ತರ ಕರ್ನಾಟಕದ ಹೆಮ್ಮೆಯ ಶಿಕ್ಷಣ ಸಂಸ್ಥೆಯಾಗಿದೆ. ಶ್ರೀಮಠ ಶಿಕ್ಷಣ ಕ್ಷೇತ್ರದಿಂದ ಯಾವುದೇ ಲಾಭವನ್ನು ನಿರೀಕ್ಷಿಸದೆ ವಿದ್ಯಾರ್ಥಿಗಳ ಬಾಳಿಗೆ ಬೆಳಕನ್ನು ನೀಡುತ್ತಾ ಬಂದಿದೆ ಎಂದು ಹೇಳಿದರು.

ಮುಖ್ಯೋಪಾಧ್ಯಾಯರಾದ ಎಂ.ಎಚ್. ಪೂಜಾರ್ ವಾರ್ಷಿಕ ವರದಿ ಮಂಡಿಸುವ ಮೂಲಕ ಇಡೀ ಶೈಕ್ಷಣಿಕ ವರ್ಷದಕ್ಕೂ ಮಾಡಿದ ಸಾಧನೆಗಳ ಮೇಲೆ ಬೆಳಕು ಚೆಲ್ಲಿದರು.

ಸಮಾರಂಭದಲ್ಲಿ ಶ್ರೀಮಠದ ಪರಮ ಭಕ್ತರಾದ ಜಯಣ್ಣ ಗುಜ್ಜರ್, ಭೂದಾನಿಗಳ ಮೊಮ್ಮಗನಾದ ಮುತ್ತನಗೌಡ ಸನಗೌಡ, ನಗರಸಭಾ ಸದಸ್ಯೆ ಲಕ್ಷ್ಮೀ ಶಂ.ಕಾಕಿ, ಹಾತಲಗೇರಿ ಗ್ರಾಮ ಪಂಚಾಯಿತಿ ಉಪಾಧ್ಯಕ್ಷರಾದ ನಿರ್ಮಲಾ ಕರಿಗೌಡರ್, ಸದಸ್ಯರಾದ ಶಿವನಗೌಡ ಕರಿಗೌಡರ್, ಸಿ.ಎಸ್. ಪಾಟೀಲ್, ಬಾಲಕಿಯರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಎಸ್.ಜಿ. ಕೊಲ್ಮಿ, ಎಸ್.ಎ. ಸಂಗನಾಳ್, ಎಂ.ಬಿ. ಭಜಂತ್ರಿ, ಕೆ.ಜಿ. ಸಂಗಟಿ, ಎಂ.ಬಿ. ಮಾರನಬಸರಿ, ಎಂ.ಟಿ. ಕಾಂಬ್ಳೆಕರ್ ಸೇರಿದಂತೆ ಶಾಲೆಯ ಗುರು ಬಳಗ, ಪಾಲಕರು, ವಿದ್ಯಾರ್ಥಿಗಳು, ದಾನಿಗಳು, ಶಿಕ್ಷಣ ಪ್ರೇಮಿಗಳು ಭಾಗವಹಿಸಿದ್ದರು. ಪಾಟೀಲ್ ಗುರುಗಳು ಕಾರ್ಯಕ್ರಮ ನಿರೂಪಿಸಿದರು. ಸಿ.ಎಸ್. ಮಠಪತಿ ಗುರುಗಳು ವಂದಿಸಿದರು.

# ರಾಷ್ಟ್ರೀಯ ಮಹಿಳಾ ಸಮ್ಮೇಳನದ ಸರ್ವಾಧ್ಯಕ್ಷರಾಗಿ ವೀಣಾ ಹೇಮಂತಗೌಡ ಪಾಟೀಲ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ಕಪ್ಪತ್ತಗಿರಿ ಫೌಂಡೇಶನ್ ವತಿಯಿಂದ ಮಾರ್ಚ್ ತಿಂಗಳಲ್ಲಿ ಆಯೋಜಿಸಿರುವ 5ನೇ ರಾಷ್ಟ್ರೀಯ ಮಹಿಳಾ ಸಮ್ಮೇಳನಕ್ಕೆ ಮುಂಡರಗಿಯ ವೀಣಾ ಹೇಮಂತಗೌಡ ಪಾಟೀಲ ಅವರು ಸರ್ವಾಧ್ಯಕ್ಷರಾಗಿ ಆಯ್ಕೆ ಆಗಿದ್ದು, ಗದಗ ನಗರದಲ್ಲಿ ಮಾರ್ಚ್ 22ರಂದು ನಡೆಯುವ ಮಹಿಳಾ ಸಮ್ಮೇಳನಕ್ಕೆ ಅವರನ್ನು ಅಧಿಕೃತವಾಗಿ ಗೌರವಿಸಿ ಆಹ್ವಾನಿಸಲಾಯಿತು.

ಕಾರ್ಯಕ್ರಮದಲ್ಲಿ ಕಪ್ಪತ್ತಗಿರಿ ಫೌಂಡೇಶನ್‌ನ ಗದಗ ಜಿಲ್ಲಾ ಅಧ್ಯಕ್ಷರಾದ ಮಮತಾ ದೊಡ್ಡಮನಿ, ಶಿರಹಟ್ಟಿ ತಾಲೂಕು ಅಧ್ಯಕ್ಷರಾದ ಶಾಂತಾ ಅಂಗಡಿ, ಗೌರವ ಅಧ್ಯಕ್ಷರಾದ ಕಾವ್ಯ ಅಂಗಡಿ, ಗದುಗಿನ ಹಿರಿಯ ಸಾಹಿತಿಗಳಾದ ಎ.ಎಸ್. ಮಕಾನದಾರ, ಕಪ್ಪತ್ತಗಿರಿ ಫೌಂಡೇಶನ್ ನಿರ್ದೇಶಕರಾದ ತೋಟಯ್ಯ ಗುಡ್ಡಿಮಠ, ಹೇಮಂತ್‌ಗೌಡ ಪಾಟೀಲ್, ಕಾವೇರಿ ಬೋಲ, ಮಧುಮತಿ ಇಳಕಲ್ ಉಪಸ್ಥಿತರಿದ್ದರು ಎಂದು ಕಪ್ಪತ್ತಗಿರಿ ಫೌಂಡೇಶನ್ ಸಂಸ್ಥಾಪಕ ರಾಜ್ಯಾಧ್ಯಕ್ಷರಾದ ಚಂದ್ರಕಲಾ ಇಟಗಿಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ‘ಉತ್ಕರ್ಷತೆಯೆಡೆಗೆ’ ವಿದ್ಯಾರ್ಥಿ ಸ್ನೇಹಿ ಕಾರ್ಯಾಗಾರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಯುವ ಕಾಂಗ್ರೆಸ್ ಘಟಕದ ಅಧ್ಯಕ್ಷರಾದ ಕೃಷ್ಣಗೌಡ ಹೆಚ್.ಪಾಟೀಲ ಇವರ ವೈಯಕ್ತಿಕ ಆಸಕ್ತಿಯಿಂದ 10ನೇ ತರಗತಿ ವಿದ್ಯಾರ್ಥಿಗಳ ಉತ್ತಮ ಫಲಿತಾಂಶಕ್ಕಾಗಿ ‘ಉತ್ಕರ್ಷತೆಯೆಡೆ’ ವಿದ್ಯಾರ್ಥಿ ಸ್ನೇಹಿ ಕಾರ್ಯಾಗಾರವನ್ನು 3 ದಿನಗಳವರೆಗೆ ಎಲ್ಲಾ ಶಾಲೆಯ ವಿದ್ಯಾರ್ಥಿಗಳಿಗೆ ಆಯೋಜಿಸಲಾಗಿತ್ತು.

ಈ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಪರೀಕ್ಷೆಯನ್ನು ಸಮರ್ಥವಾಗಿ ಎದುರಿಸುವ ಕುರಿತು ಸಲಹೆ-ಸೂಚನೆ ನೀಡುವುದರ ಮೂಲಕ ಎಲ್ಲ ವಿದ್ಯಾರ್ಥಿಗಳಲ್ಲಿ ಪರೀಕ್ಷೆಯ ಭಯವನ್ನು ಹೋಗಲಾಡಿಸಲು ಈ ಪ್ರಯತ್ನ ನಡೆಯಿತಲ್ಲದೆ, ಇದು ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸವನ್ನು ಮೂಡಿಸಿತು.

ಈ ಕಾರ್ಯಾಗಾರದಿಂದ ಉತ್ತಮ ಫಲಿತಾಂಶ ಸಿಗಲಿದೆ ಎಂಬ ಭರವಸೆ ಮೂಡಿದೆ.

ಇದು ನಮ್ಮ ಯುವ ನಾಯಕರ ದೂರದೃಷ್ಟಿ ಹಾಗೂ ವಿದ್ಯಾರ್ಥಿಗಳ ಮೇಲೆ ಇರುವ ಕಾಳಜಿಯನ್ನು ತಿಳಿಸುತ್ತದೆ ಎಂದು ಗದಗ ಬೆಟಗೇರಿ ಬ್ಲಾಕ್ ಯುವ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾದ ಅನ್ವರ್ ನದಾಫ್ ಹಾಗೂ ಅಭಿಷಯ್ ತಿಳಿಸಿದಾರೆ.



# ನಮಗೆ ಯಾವುದೇ ರಾಜಕೀಯ ಪಕ್ಷದ ಒಲವಿಲ್ಲ



■ವಿಜಯಸಾಕ್ಷಿ ಸುದ್ದಿ, ಗದಗ

ಗುತ್ತಿಗೆದಾರರ ಸಂಘದ ರಾಜ್ಯಾಧ್ಯಕ್ಷ ಆರ್. ಮಂಜುನಾಥರನ್ನು ನಗರದ ಪ್ರವಾಸಿ ಮಂದಿರದಲ್ಲಿ ಗದಗ ಜಿಲ್ಲಾ ಗುತ್ತಿಗೆದಾರರ ಸಂಘದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಗದಗ ಜಿಲ್ಲಾ ಗುತ್ತಿಗೆದಾರರು ನನಗೆ ತೋರಿದ ಪ್ರೀತಿ, ವಿಶ್ವಾಸಕ್ಕೆ ಅಭಾರಿಯಾಗಿದ್ದೇನೆ. ಇವತ್ತು ಗುತ್ತಿಗೆದಾರರು ಬಹಳ ಆರ್ಥಿಕ ತೊಂದರೆಯಲ್ಲಿ ಸಿಲುಕಿಕೊಂಡಿದ್ದೇವೆ. ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ವತಿಯಿಂದ ಗುತ್ತಿಗೆದಾರರಿಗೆ ಸುಮಾರು 37 ಸಾವಿರ ಕೋಟಿ ರೂಪಾಯಿ ಹಣ ಬಾಕಿ ಉಳಿದಿದ್ದು, ಇಂದು ಅನೇಕ ಗುತ್ತಿಗೆದಾರರು ತಮ್ಮ ಮನೆಯಲ್ಲಿರುವ ಬಂಗಾರವನ್ನು ಅಡವಿಟ್ಟು ರಾಜ್ಯದ ಅಭಿವೃದ್ಧಿಗಾಗಿ ವಿವಿಧ ಕಾಮಗಾರಿಗಳನ್ನು ನೆರವೇರಿಸಿದ್ದಾರೆ. ಈಗ ಅದರ ಬಡ್ಡಿ ಕಟ್ಟುತ್ತಿದ್ದಾರೆ. ನಮಗೆ ಯಾವುದೇ ರಾಜಕೀಯ ಪಕ್ಷದ ಒಲವು ಇಲ್ಲ. ಕಾಂಗ್ರೆಸ್, ಬಿಜೆಪಿ, ಜೆಡಿಎಸ್ ಅಥವಾ ಇತರೆ ಯಾವುದೇ ಪಕ್ಷಗಳನ್ನು ನಾವು ಹೊಗಳುವುದಿಲ್ಲ, ದೂಷಿಸುವುದಿಲ್ಲ ಎಂದು ಹೇಳಿದರು.

ಸರ್ಕಾರಗಳು ನೀಡಿದ ಕೆಲಸಗಳನ್ನು ನಾವು ಪ್ರಾಮಾಣಿಕವಾಗಿ ನಿರ್ವಹಿಸಿದ್ದೇವೆ. ರಾಜ್ಯ ಸರ್ಕಾರ ಆದಷ್ಟು ಬೇಗ ನಮ್ಮ ಬಾಕಿ ಹಣವನ್ನು ಕೊಟ್ಟು ಗುತ್ತಿಗೆದಾರರನ್ನು ಸಂಕಷ್ಟದಿಂದ ಪಾರು ಮಾಡಬೇಕಾಗಿದೆ. ದಿನಕಳೆದಂತೆ ಗುತ್ತಿಗೆದಾರರ ಆರ್ಥಿಕ ಸಂಕಷ್ಟ ದೊಡ್ಡ ಪ್ರಮಾಣದಲ್ಲಿ ಆಗಲಿದೆ. ರಾಜ್ಯದ ಮುಖ್ಯಮಂತ್ರಿಗಳು, ಸರ್ಕಾರದ ವಿವಿಧ ಇಲಾಖೆಯ ಸಚಿವರು ಮುತುವರ್ಜಿ ವಹಿಸಿ ಗುತ್ತಿಗೆದಾರರ ಹಣವನ್ನು ಪಾವತಿಸುವಂತೆ ಕ್ರಮ ಕೈಗೊಳ್ಳಬೇಕೆಂದು ವಿನಂತಿಸಿದರು.

ಈ ಸಂದರ್ಭದಲ್ಲಿ ಸಿದ್ದು ಪಾಟೀಲ, ವಿ.ಜಿ. ಮುಲ್ಕಿಪಾಟೀಲ, ಎ.ಬಿ. ಕಟಗಿ, ಆರ್.ಡಿ. ರಂಗಪ್ಪನವರ್, ಬಿ.ವಾಯ್. ಶಿರಗುಂಪಿ, ಸುರೇಶ ತಿರ್ಲಾಪುರ, ಬಸವರಾಜ ಮೇಟಿ, ಎ.ಎಚ್. ಪಾಟೀಲ, ಬಿ.ಆರ್. ಹೊಸಮನಿ, ಬಸವರಡ್ಡಿ ಹಂಚಿನಾಳ, ಅನ್ನಪ್ಪ ದಾರಿಯನ್ನವರ, ಸಿ.ಎಸ್. ನಾಗಾವಿ, ಎಂ.ಎಸ್. ಮಾದನ್ನವರ, ಯುವರಾಜ ಬಳ್ಳಾರಿ, ವಿಶ್ವನಾಥ ಪಾಟೀಲ, ಬೆಳಹುಣಸಿ, ಹೊಸಂಗಡಿ, ಗುರನ್ನ ಕುರ್ತಕೋಟಿ, ದಾಯಮ್ಮನವರ, ಎಮ್.ವ್ಹಿ. ಗಾಣಿಗೇರ, ಎಸ್.ಎಚ್. ಪಾಟೀಲ್, ಬಿರಾದಾರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳಿಗೆ ಸಮವಸ್ತ್ರ ವಿತರಣೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಕಿವುಡ ಮಕ್ಕಳ ಶಾಲೆಯ ನೂರು ವಿದ್ಯಾರ್ಥಿಗಳಿಗೆ ಗಜೇಂದ್ರಗಡ ಐಟಿಐ ಕಾಲೇಜಿನ ಪ್ರಾಚಾರ್ಯರಾದ ಎ.ಪಿ. ಗಾಣಿಗೇರ ಅವರು ತಮ್ಮ ಪುತ್ರ ಕುಮಾರೇಶ ಅವರ 6ನೇ ಜನ್ಮ ದಿನದ ನಿಮಿತ್ತ ಸುಮಾರು 35000 ರೂ.ಗಳ ಶಾಲಾ ಸಮವಸ್ತ್ರಗಳನ್ನು ವಿದ್ಯಾರ್ಥಿಗಳಿಗೆ ವಿತರಿಸಿದರು.

ಈ ಸಂದರ್ಭದಲ್ಲಿ ಮುಖಂಡ ಸಿದ್ದಣ್ಣ ಬಂಡಿ ಮಾತನಾಡಿ, ವಿಶೇಷ ಚೇತನ ಮಕ್ಕಳಲ್ಲಿ ವಿಶೇಷವಾದ ಶಕ್ತಿ ಇರುತ್ತದೆ. ಅದನ್ನು ಹೊರತೆಗೆಯುವುದು ಕಷ್ಟಕರ ಕೆಲಸವಾದರೂ ಇಲ್ಲಿನ ಶಿಕ್ಷಕರು ಆ ಕಾರ್ಯವನ್ನು ಅತ್ಯಂತ ಶ್ರದ್ಧೆಯಿಂದ ಮಾಡುತ್ತಿದ್ದಾರೆ. ಲಿಂ. ಡಾ. ಅಭಿನವ ಅನ್ನದಾನ ಮಹಾಸ್ವಾಮಿಗಳವರು ಇಲ್ಲಿ ವಿಶೇಷ ಚೇತನರ ಶಾಲೆಯನ್ನು ತೆರೆಯುವ ಮೂಲಕ ಅವರ ಬದುಕಿಗೊಂದು ಅರ್ಥ ಕಲ್ಪಿಸಿದ್ದಾರೆ. ಇಂತಹ ಮಕ್ಕಳಿಗೆ ಸಮವಸ್ತ್ರ ನೀಡುವ ಮೂಲಕ ಅಮರೇಶ ಗಾಣಿಗೇರರು ಜನ್ಮದಿನಾಚರಣೆಗಳನ್ನು ಹೇಗೆ ಆಚರಿಸಬೇಕೆಂಬುದಕ್ಕೆ ಮಾದರಿಯಾಗಿದ್ದಾರೆ ಎಂದರು.

ಶಾಲೆಯ ಚೇರಮನ್ ಶರಣಪ್ಪ ರೇವಡಿ ಅಧ್ಯಕ್ಷತೆ ವಹಿಸಿದ್ದರು. ಈ ವೇಳೆಬಸಣ್ಣ ಬೇಲೇರಿ, ನಾಗಣ್ಣ ಲಕ್ಕಲಕಟ್ಟಿ, ಶಿವಯ್ಯ ಚಕ್ಕಡಿಮಠ, ವೈ.ಎಸ್. ಪಾಟೀಲ, ಈಶಪ್ಪ ಮ್ಯಾಗೇರಿ, ಪ್ರಭು ಹಿರೇಮಠ, ವೀರಯ್ಯ ಕಲ್ಮಂಗಿಮಠ, ಡಾ. ಶರಣು ಗಾಣಿಗೇರ, ಅಮರೇಶ ಗಾಣಿಗೇರ ದಂಪತಿಗಳು, ಮುಖ್ಯೋಪಾಧ್ಯಾಯ ಎಲ್.ಎಂ. ತಳಬಾಳ, ಬ್ರಹ್ಮಾನಂದ ಗಾಣಿಗೇರ, ಆರ್.ಕೆ. ಬಾಗವಾನ, ಎಸ್.ವಿ. ಪಾಟೀಲ, ರಫೀಕ ರೇವಡಿಗಾರ, ಗಾಣಿಗೇರ ಕುಟುಂಬದವರು ಇದ್ದರು.

# ಕುರಿ, ಮೇಕೆ ಸಾಕಾಣಿಕೆಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ಬೆಂಗಳೂರು ವತಿಯಿಂದ 2025-26ನೇ ಸಾಲಿನಲ್ಲಿ ವಿಶೇಷ ಘಟಕ ಯೋಜನೆ ಪರಿಶಿಷ್ಟ ಜಾತಿಗೆ (9), ಗಿರಿಜನ ಉಪಯೋಜನೆ ಪರಿಶಿಷ್ಟ ಪಂಗಡಕ್ಕೆ 3 ಕುರಿ/ಮೇಕೆ ಸಾಕಾಣಿಕೆ ಯೋಜನೆಗಾಗಿ ಗದಗ ಜಿಲ್ಲೆಗೆ ಫಲಾನುಭವಿಗಳ ಆಯ್ಕೆಗೆ ಅರ್ಜಿ ಆಹ್ವಾನಿಸಲಾಗಿದೆ. 18ರಿಂದ 60 ವರ್ಷ ವಯೋಮಿತಿಯೊಳಗಿನವರು ಅರ್ಜಿ ಸಲ್ಲಿಸಬಹುದು. ಮಹಿಳೆಯರಿಗೆ (33.3%), ವಿಕಲಚೇತನರಿಗೆ (3%) ಮತ್ತು ಪುರುಷ ಕುರಿ/ಮೇಕೆ ಸಾಕಾಣಿಕೆದಾರರು ಅರ್ಜಿಗಳನ್ನು ಮಾರ್ಚ್ 5ರೊಳಗೆ ಆಯಾ ತಾಲೂಕಿನ ಮುಖ್ಯ ಪಶು ವೈದ್ಯಾಧಿಕಾರಿಗಳಿಗೆ ಅರ್ಜಿಯನ್ನು ನೀಡಬೆಕು.

ಕಳೆದ 5 ವರ್ಷಗಳಲ್ಲಿ ಪಶುಪಾಲನಾ ಇಲಾಖೆ ಮತ್ತು ಕುರಿ ನಿಗಮದಿಂದ ಯಾವುದೇ ಸೌಲಭ್ಯ ಪಡೆದವರು ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಮುಖ್ಯ ಪಶು ವೈದ್ಯಾಧಿಕಾರಿಗಳು, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ-ಗದಗ ಇವರನ್ನು ಕಛೇರಿಯ ವೇಳೆಯಲ್ಲಿ ಸಂಪರ್ಕಿಸಬಹುದ ಎಂದು ಪ್ರಕಟಣೆ ತಿಳಿಸಿದೆ. ಹೆಚ್ಚಿನ ಮಾಹಿತಿಗೆ ದೂರವಾಣಿ-9448861862, 9663570842 ಸಂಪರ್ಕಿಸಬಹುದಾಗಿದೆ.

**ಕಪ್ಪತ್ತಗುಡ್ಡ ವಲಯಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ವಡ್ನಾಳ ಜಗದೀಶ**

# ಕಪ್ಪತ್ತಗುಡ್ಡ ಸಂರಕ್ಷಣೆ ನಮ್ಮೆಲ್ಲರ ಹೊಣೆ



■ವಿಜಯಸಾಕ್ಷಿ ಸುದ್ದಿ, ಡಂಬಳ

ಉತ್ತರ ಕರ್ನಾಟಕದ ಸಹ್ಯಾದ್ರಿ ಎಂದೇ ಪ್ರಸಿದ್ಧಿ ಪಡೆದಿರುವ ಕಪ್ಪತ್ತಗುಡ್ಡ ಸಂರಕ್ಷಣೆ ನಮ್ಮೆಲ್ಲರ ಹೊಣೆ ಎಂದು ಕರ್ನಾಟಕ ರಾಜ್ಯ ಜೀವವೈವಿಧ್ಯ ಮಂಡಳಿ ಅಧ್ಯಕ್ಷ ವಡ್ನಾಳ ಜಗದೀಶ ಹೇಳಿದರು.

ಮುಂಡರಗಿ ತಾಲೂಕಿನ ಡಂಬಳ ಹೋಬಳಿಯ ಹೊರವಲಯದಲ್ಲಿರುವ ಕಪ್ಪತ್ತಗುಡ್ಡ ವಲಯಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಮಾತನಾಡಿದ ಅವರು, ಜೀವ ವೈವಿಧ್ಯದ ಆಗರವಾಗಿರುವ ಹಾಗೂ ಅಪರೂಪದ ಅಮೂಲ್ಯ ಔಷಧೀಯ ಸಸ್ಯಗಳ ತಾಣವಾಗಿರುವ ಈ ಪ್ರದೇಶವನ್ನು ಸಂರಕ್ಷಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದರು. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಅನುದಾನವನ್ನು ಸಮರ್ಪಕವಾಗಿ ಬಳಸಿ ಕಪ್ಪತ್ತಗುಡ್ಡದ ಸಂರಕ್ಷಣೆಗೆ ಆದ್ಯತೆ ನೀಡಬೇಕು ಎಂದು ಅಭಿಪ್ರಾಯಪಟ್ಟರು.

“ಕಪ್ಪತ್ತಗುಡ್ಡವನ್ನು ಉಳಿಸಿ ಬೆಳೆಸಿದರೆ ಈ ಭಾಗದ ಜನತೆಗೆ ಸಮೃದ್ಧ ಮಳೆ, ಉತ್ತಮ ಬೆಳೆ ಹಾಗೂ ಆರೋಗ್ಯಕರ ಪರಿಸರ ಲಭ್ಯವಾಗುತ್ತದೆ. ಪರಿಸರವೇ ಮಾನವನ ಜೀವನದ ಮೂಲಾಧಾರ” ಎಂದು ಅವರು ಹೇಳಿದರು. ಅಲ್ಲದೆ, ಕಪ್ಪತ್ತಗುಡ್ಡದಲ್ಲಿರುವ ಔಷಧೀಯ ಸಸ್ಯಗಳ ಸಮಗ್ರ ನೀಲನಕ್ಷೆ (ಬ್ಲೂಪ್ರಿಂಟ್) ಸಿದ್ಧಪಡಿಸಿ, ಆಯುರ್ವೇದ ಹಾಗೂ ನಾಟಿ ವೈದ್ಯಕೀಯ ಕ್ಷೇತ್ರದಲ್ಲಿ ಅದರ ಮಹತ್ವವನ್ನು ಒತ್ತಿ ಹೇಳುವಂತೆ ಸೂಚಿಸಿದರು.

ಈ ಸಂದರ್ಭದಲ್ಲಿ ಕಳ್ಳಬೇಟೆ ತಡೆ ಶಿಬಿರಗಳು, ಚೆಕ್‌ಪೋಸ್ಟ್‌ಗಳಿಗೆ ಭೇಟಿ ನೀಡಿ ಅರಣ್ಯ ವೀಕ್ಷಕರೊಂದಿಗೆ ಸಂವಾದ ನಡೆಸಿದರು. ಕಾಡಿನೊಳಗಿನ ನೀರಿನ ತೊಟ್ಟಿಗಳು, ಬೋರ್‌ವೆಲ್‌ಗಳ ಉಪಯೋಗ, ಹುಲ್ಲುಗಾವಲು ಪ್ರದೇಶಗಳು ಹಾಗೂ ಮಾನವ-ಪ್ರಾಣಿ ಸಂಘರ್ಷ ತಡೆಗಾಗಿ ನಿರ್ಮಿಸಲಾದ ಕಮಾಂಡ್ ಮತ್ತು ನಿಯಂತ್ರಣ ಕೇಂದ್ರವನ್ನು ವೀಕ್ಷಿಸಿದರು.

> “ಕಪ್ಪತ್ತಗುಡ್ಡದಲ್ಲಿ 23 ಪ್ರಭೇದದ ಸಸ್ತನಿಗಳು, 222 ಬಗೆಯ ಹಕ್ಕಿಗಳು, 10 ಜಾತಿಯ ಸರೀಸೃಪಗಳು, 20 ಬಗೆಯ ಚಿಟ್ಟೆಗಳು ಹಾಗೂ 500ಕ್ಕೂ ಹೆಚ್ಚು ಔಷಧೀಯ ಗಿಡಮೂಲಿಕೆಗಳು ಕಂಡುಬರುತ್ತವೆ. ಇವುಗಳ ಸಂರಕ್ಷಣೆ ಅರಣ್ಯ ಇಲಾಖೆಯಷ್ಟೇ ಅಲ್ಲ, ಪ್ರತಿಯೊಬ್ಬ ನಾಗರಿಕರ ಜವಾಬ್ದಾರಿಯಾಗಿದೆ”
>
> – **ಗೋವರ್ಧನ ಸಿಂಗ್,** ಜೀವ ವೈವಿಧ್ಯ ಅರಣ್ಯಾಧಿಕಾರಿ

ಗದಗ ಡಿಎಫ್‌ಒ ಸಂತೋಷ ಕೆಂಚಪ್ಪನವರ ಹಾಗೂ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ (ಎಸಿಎಫ್) ಮಾಂತೇಶ ಪೋಲಿಸಪಾಟೀಲ ಮಾತನಾಡಿ, ಕಳ್ಳಬೇಟೆ ಮತ್ತು ಅರಣ್ಯ ನಾಶ ತಡೆಗೆ ಕಠಿಣ ಕ್ರಮ ಕೈಗೊಳ್ಳಲಾಗುತ್ತಿದ್ದು, ಮಾನವ-ಪ್ರಾಣಿ ಸಂಘರ್ಷ ತಡೆಯಲು ಹಾಗೂ ವನ್ಯಜೀವಿ ರಕ್ಷಣೆಗೆ ಇಲಾಖೆ ಗಂಭೀರವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ತಿಳಿಸಿದರು. ಕಾಡಿನೊಳಗಿನ ನೀರಿನ ಮೂಲಗಳ ಸಂರಕ್ಷಣೆ ಹಾಗೂ ಪರಿಸರ ಅಭಿವೃದ್ಧಿಗೆ ನಿರಂತರ ನಿಗಾವಹಿಸಲಾಗುತ್ತಿದೆ ಎಂದರು.

ಅಧ್ಯಕ್ಷರ ಸಲಹೆಯಂತೆ ಔಷಧೀಯ ಸಸ್ಯಗಳ ನೀಲನಕ್ಷೆ ಶೀಘ್ರದಲ್ಲೇ ಸಿದ್ಧಪಡಿಸಲಾಗುವುದು ಎಂದು ಅಧಿಕಾರಿಗಳು ಭರವಸೆ ನೀಡಿದರು. ಈ ಸಂದರ್ಭದಲ್ಲಿ ಆರ್‌ಎಫ್ ಮಂಜುನಾಥ ಮೇಗಲಮನಿ, ರಾಜ್ಯ ಡಿಎಸ್‌ಎಸ್ ಅಲ್ಪಸಂಖ್ಯಾತರ ರಾಜ್ಯಾಧ್ಯಕ್ಷ ಜಬಿವುಲ್ಲಾ ಎ.ಆರ್, ಮಾರುತಿ ಕಾಳಪ್ಪನವರ, ಮಹಾಂತಪ್ಪ ಮುಷೆಪ್ಪನವರ, ಹಾಲಪ್ಪ ಭಂಡಾರಿ, ಮಾಜಿ ಗ್ರಾಪಂ ಸದಸ್ಯ ಮಾರ್ತಾಂಡಪ್ಪ ಹೆಚ್ ಸೇರಿದಂತೆ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka